# ಬೆಳಗಾವಿ ವಾರ್ತೆ

ಕನ್ನಡ ದಿನ ಪತ್ರಿಕೆ, ಬೆಳಗಾವಿ

ಸಂಪಾದಕರು : ಮಹೇಶ್ವರಿ ಭೀಮಶಿ ಭರಮಣ್ಣವರ

EDITOR : MAHESHWARI BHIMASHI BHARAMANNAVARA

BELAGAVI VARTE

KANNADA DAILY MORNING BELAGAVI

G-mail: belagavivarte1@gmail.com

Volume: 01 | Issue : 18 | WEDNESDAY 25-03-2026 | PRGI No : KNKAN/26/A0962 | Pages:4 | Rs.2.00 | M: 9742418836


## ಉಪ ಚುನಾವಣೆ: ಎರಡೂ ಕ್ಷೇತ್ರಗಳಲ್ಲೂ ಕಾಂಗ್ರೆಸ್ ಗೆಲ್ಲುವ ಸಂಪೂರ್ಣ ವಿಶ್ವಾಸವಿದೆ



ದಾವಣಗೆರೆ: ದಾವಣಗೆರೆ ಹಾಗೂ ಬಾಗಲಕೋಟೆ ಉಪ ಚುನಾವಣೆಯಲ್ಲಿ ಕಾಂಗ್ರೆಸ್ ಗೆಲ್ಲುವ ಸಂಪೂರ್ಣ ವಿಶ್ವಾಸವಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಸೋಮವಾರ ಹೇಳಿದ್ದಾರೆ. ಈ ಚುನಾವಣೆಯಲ್ಲಿ ಈ ಹಿಂದಿನ ಉಪ ಚುನಾವಣೆಯಂತೆ ಬಿಜೆಪಿ ಸೋಲಲಿದೆ ಎಂದಿದ್ದಾರೆ.

ಕಾಂಗ್ರೆಸ್‌ನ ಇತರ ಟಿಕೆಟ್ ಆಕಾಂಕ್ಷಿಗಳ ಅಸಮಾಧಾನವನ್ನು ತಳ್ಳಿಹಾಕಿದ ಅವರು, ಎಲ್ಲರನ್ನೂ ಮನವೊಲಿಸಿ ಪಕ್ಷದ ಗೆಲುವಿಗೆ ಒಗ್ಗಟ್ಟಿನಿಂದ ಕೆಲಸ ಮಾಡುತ್ತೇವೆ ಎಂದು ಹೇಳಿದ್ದಾರೆ.

ಬಾಗಲಕೋಟೆ ಮತ್ತು ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರಗಳಿಗೆ ಏಪ್ರಿಲ್ 9 ರಂದು ಉಪ ಚುನಾವಣೆ ನಡೆಯಲಿದೆ. ಹಿರಿಯ ಕಾಂಗ್ರೆಸ್ ಶಾಸಕರಾದ ಎಚ್ ವೈ ಮೇಟಿ ಮತ್ತು ಶಾಮನೂರು ಶಿವಶಂಕರಪ್ಪ ಅವರ ನಿಧನದ ಹಿನ್ನೆಲೆಯಲ್ಲಿ ಚುನಾವಣೆ ಅನಿವಾರ್ಯವಾಗಿದೆ.

ಸುದ್ದಿಗಾರರೊಂದಿಗೆ ಮಾತನಾಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ ಎರಡೂ ಸ್ಥಾನಗಳನ್ನು ಗೆಲ್ಲುತ್ತೇವೆ ಎಂದು ನನಗೆ ನೂರಕ್ಕೆ ನೂರು ವಿಶ್ವಾಸವಿದೆ. ಬಿಜೆಪಿಯವರು ಗೆಲ್ಲುತ್ತೇವೆ ಎಂದು ಹೇಳಬಹುದು, ಆದರೆ ಅವರು ಎಲ್ಲಿ ಗೆದ್ದಿದ್ದಾರೆ? ಹಿಂದಿನ ಉಪಚುನಾವಣೆಯಲ್ಲಿ ಅವರು ಇದೇ ರೀತಿಯ ಹೇಳಿಕೆ ನೀಡಿದ್ದರು. ನಾವು ಮಾಜಿ ಸಿಎಂಗಳಾದ ಬಸವರಾಜ ಬೊಮ್ಮಾಯಿ ಮತ್ತು ಎಚ್‌ಡಿ ಕುಮಾರಸ್ವಾಮಿ ಅವರ ಪುತ್ರರನ್ನು ಸೋಲಿಸಲಿಲ್ಲವೇ? ಎಂದರು.

ಬಿಜೆಪಿಯವರು ಹೇಳಿಕೊಳ್ಳಬಹುದು, ಆದರೆ ಕಾಂಗ್ರೆಸ್ ಸರ್ಕಾರ ತನ್ನ ಚುನಾವಣಾ ಭರವಸೆಗಳನ್ನು ಈಡೇರಿಸಿದೆ ಮತ್ತು ಐದು ಗ್ಯಾರಂಟಿ ಯೋಜನೆಗಳನ್ನು ಜಾರಿಗೊಳಿಸುವ ಮೂಲಕ ನುಡಿದಂತೆ ನಡೆದಿದೆ. ರಾಜ್ಯದ ಜನರು ಕಾಗ್ರೆಸ್ ಪರವಾಗಿದ್ದಾರೆ. ಹಿಂದಿನ ಉಪಚುನಾವಣೆಯಲ್ಲಿ ನಾವು ಅದನ್ನು ಸಾಬೀತುಪಡಿಸಿದ್ದೇವೆ. ದಲಿತರು, ಹಿಂದುಳಿದ ವರ್ಗದವರು, ಬಡವರು, ರೈತರು ಮತ್ತು ಅಲ್ಪಸಂಖ್ಯಾತರು ಸೇರಿದಂತೆ ಎಲ್ಲರೂ ನಮ್ಮೊಂದಿಗಿದ್ದಾರೆ ಎಂದು ಅವರು ಹೇಳಿದರು.

ಉಪಚುನಾವಣೆ ಫಲಿತಾಂಶವು ರಾಜ್ಯದಲ್ಲಿ 2028 ರ ವಿಧಾನಸಭಾ ಚುನಾವಣೆಯ ದಿಕ್ಸೂಚಿ ಎಂಬ ಕೆಲ ಬಿಜೆಪಿ ನಾಯಕರ ಹೇಳಿಕೆ ಕುರಿತು ಪ್ರತಿಕ್ರಿಯಿಸಿದ ಸಿದ್ದರಾಮಯ್ಯ, ಅವರು ಗೆಲ್ಲುವುದಿಲ್ಲ. ನಾವು ಅಧಿಕಾರದಲ್ಲಿದ್ದೇವೆ, ನಾವು ಈ ಹಿಂದೆ ಮೂರು ಉಪಚುನಾವಣೆಗಳನ್ನು ಗೆದ್ದಿದ್ದೇವೆ. ಈ ಉಪಚುನಾವಣೆಯಲ್ಲೂ ನಾವು ಗೆಲ್ಲುತ್ತೇವೆ ಎಂಬ ವಿಶ್ವಾಸವಿದೆ ಎಂದು ಅವರು ಹೇಳಿದರು.

2024ರ ನವೆಂಬರ್‌ನಲ್ಲಿ ನಡೆದ ಮೂರು ವಿಧಾನಸಭಾ ಕ್ಷೇತ್ರಗಳಾದ ಸಂಡೂರು, ಶಿಗ್ಗಾಂವ್ ಮತ್ತು ಚನ್ನಪಟ್ಟಣ ಉಪಚುನಾವಣೆಯಲ್ಲಿ ಕಾಂಗ್ರೆಸ್ ಜಯಭೇರಿ ಬಾರಿಸಿತ್ತು. ಚುನಾವಣೆ ನಡೆಯಲಿರುವ ಅಸ್ಸಾಂ, ಕೇರಳ, ತಮಿಳುನಾಡು, ಪಶ್ಚಿಮ ಬಂಗಾಳ ಮತ್ತು ಕೇಂದ್ರಾಡಳಿತ ಪ್ರದೇಶವಾದ ಪುದುಚೇರಿಯಲ್ಲಿ ಬಿಜೆಪಿ ಸೋಲಲಿದೆ ಎಂದು ಸಿದ್ದರಾಮಯ್ಯ ಪ್ರಶ್ನೆಯೊಂದಕ್ಕೆ ಉತ್ತರಿಸಿದರು.

ಪಕ್ಷದ ಟಿಕೆಟ್‌ಗಾಗಿ ತೀವ್ರ ಪೈಪೋಟಿಯ ನಡುವೆ ಹಲವು ಸುತ್ತಿನ ಚರ್ಚೆಯ ನಂತರ, ಕಾಂಗ್ರೆಸ್ ಭಾನುವಾರ ಬಾಗಲಕೋಟೆ ಮತ್ತು ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರದ ಉಪಚುನಾವಣೆಗೆ ಕ್ರಮವಾಗಿ ಉಮೇಶ್ ಮೇಟಿ ಮತ್ತು ಸಮರ್ಥ ಮಲ್ಲಿಕಾರ್ಜುನ ಅವರನ್ನು ಪಕ್ಷದ ಅಭ್ಯರ್ಥಿಗಳಾಗಿ ಘೋಷಿಸಿತು.

ಎರಡೂ ಕ್ಷೇತ್ರಗಳಲ್ಲಿ ದಿವಂಗತ ಶಾಸಕರ ಕುಟುಂಬದ ಸದಸ್ಯರಿಗೆ ಕಾಂಗ್ರೆಸ್ ಟಿಕೆಟ್ ನೀಡಿದೆ. ಉಮೇಶ್ ಮೇಟಿ ಎಚ್ ವೈ ಮೇಟಿ ಅವರ ಪುತ್ರನಾದರೆ, ಸಮರ್ಥ ಮಲ್ಲಿಕಾರ್ಜುನ್ ಶಾಮನೂರು ಶಿವಶಂಕರಪ್ಪ ಅವರ ಮೊಮ್ಮಗ. ಅದರಲ್ಲೂ ದಾವಣಗೆರೆ ದಕ್ಷಿಣ ಕ್ಷೇತ್ರದಲ್ಲಿ ಅಭ್ಯರ್ಥಿ ಆಯ್ಕೆ ಹಿನ್ನೆಲೆಯಲ್ಲಿ ಪಕ್ಷದೊಳಗಿನ ಅಸಮಾಧಾನ ಬಗೆಹರಿಯಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದ ಸಿಎಂ, ಅಭ್ಯರ್ಥಿ ಆಯ್ಕೆ ಪಕ್ಷದ ಸರ್ವಾನುಮತದ ನಿರ್ಧಾರ ಎಂದರು.

ಟಿಕೆಟ್ ಆಕಾಂಕ್ಷಿ ಸಾದಿಕ್ ಪೈಲ್ವಾನ್ ಅವರು ದಾವಣಗೆರೆ ದಕ್ಷಿಣದಲ್ಲಿ ಬಂಡಾಯವಾಗಿ ಸ್ಪರ್ಧಿಸುವ ಕುರಿತು ಪ್ರತಿಕ್ರಿಯಿಸಿದ ಸಿಎಂ ಸಿದ್ದರಾಮಯ್ಯ, ಅವರಿಗೆ ಮನವರಿಕೆ ಮಾಡಿಕೊಡುವ ಪ್ರಯತ್ನ ಮಾಡುತ್ತೇವೆ ಎಂದರು.

ದಾವಣಗೆರೆ ದಕ್ಷಿಣ ಕ್ಷೇತ್ರದಲ್ಲಿ ಮುಸ್ಲಿಂ ಸಮುದಾಯದವರ ಸಂಖ್ಯೆ ಗಣನೀಯವಾಗಿ ಇರುವುದರಿಂದ ಅವರಿಗೆ ಟಿಕೆಟ್ ನೀಡಬೇಕೆಂದು ಮುಸ್ಲಿಂ ಬಾಂಧವರಿಂದಲೂ ಭಾರಿ ಬೇಡಿಕೆ ಇತ್ತು. ಶಾಮನೂರು ಕುಟುಂಬಕ್ಕೆ ಟಿಕೆಟ್ ನೀಡುವುದಕ್ಕೆ ಕಾಂಗ್ರೆಸ್‌ನ ಕೆಲವು ಬಣಗಳು ವಿರೋಧ ವ್ಯಕ್ತಪಡಿಸಿದ್ದವು.

## ಪ್ರಧಾನಿಯಾಗಿ ಮೋದಿಜೀ ಜನಪ್ರಿಯತೆ ಯಾವತ್ತೂ ಕುಗ್ಗಿಲ್ಲ: ಬಿ.ವೈ ವಿಜಯೇಂದ್ರ



ಬೆಂಗಳೂರು: ಸ್ವಾತಂತ್ರ್ಯ ಬಂದ ನಂತರದಲ್ಲಿ ಸತತ 3ನೇ ಬಾರಿಗೆ ಪ್ರಧಾನಿಗಳಾಗಿ ಮೋದಿ ಅವರ ಜನಪ್ರಿಯತೆ ಯಾವತ್ತೂ ಕುಗ್ಗಿಲ್ಲ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಭಾನುವಾರ ಹೇಳಿದರು.

ಮಾಧ್ಯಮ ಪ್ರತಿನಿಧಿಗಳ ಜೊತೆ ಮಾತನಾಡಿದ ಅವರು, ಪ್ರಧಾನಿ ನರೇಂದ್ರ ಮೋದಿ ಅವರು, 8,931 ದಿನಗಳ ಕಾಲ ನಿರಂತರವಾಗಿ ಆಡಳಿತ ನಡೆಸುತ್ತಿರುವುದು ನಮ್ಮೆಲ್ಲರಿಗೂ ತುಂಬ ಸಂತೋಷ ತಂದು ಕೊಟ್ಟ ವಿಚಾರ. ಇದು ಬಹಳ ದೊಡ್ಡ ಮೈಲಿಗಲ್ಲು ಎಂದರು.

ಪ್ರಧಾನಿ ನರೇಂದ್ರ ಮೋದಿಜೀ ಆಡಳಿತ ಬಗ್ಗೆ ಇವತ್ತು ದೇಶಾದ್ಯಂತ ಶ್ಲಾಘನೆ ಮಾಡುತ್ತಿದ್ದಾರೆ ಎಂದು ತಿಳಿಸಿದರು. ಭಾರತವು ಎಲ್ಲ ಕ್ಷೇತ್ರಗಳಲ್ಲೂ ಮುಂದೆ ಸಾಗುತ್ತಿರುವ ಸಂದರ್ಭದಲ್ಲಿ ಮೋದಿಜೀ ಅವರು ದಿಟ್ಟ ನಾಯಕತ್ವ ನೀಡಿದ್ದಾರೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು. ಬಿಜೆಪಿ ಅಭ್ಯರ್ಥಿಗಳು ಗೆದ್ದು ಬರ್ತಾರೆ: ಬಾಗಲಕೋಟೆಗೆ ಮಾಜಿ ಶಾಸಕ ವೀರಣ್ಣ ಚರಂತಿಮಠ್, ದಾವಣಗೆರೆ ದಕ್ಷಿಣಕ್ಕೆ ಶ್ರೀನಿವಾಸ ದಾಸ್ ಕರಿಯಪ್ಪ ನಮ್ಮ ಅಭ್ಯರ್ಥಿಯಾಗಿದ್ದಾರೆ. ಕಾರ್ಯಕರ್ತರಲ್ಲಿ ರಣೋತ್ಸಾಹ ಕಾಣುತ್ತಿದೆ. ಮತ್ತೊಂದು ಕಡೆ ಮತದಾರರು ರಾಜ್ಯ ಸರಕಾರದ ವಿರುದ್ಧ ಬೇಸತ್ತಿದ್ದಾರೆ. ಜನವಿರೋಧಿ, ಬಡವರ ವಿರೋಧಿ, ರೈತ ವಿರೋಧಿ, ಯುವಜನತೆಯ ಭವಿಷ್ಯವನ್ನು ಹಾಳುಗೆಡಹಿದ ಈ ಕಾಂಗ್ರೆಸ್ ಸರಕಾರದ ವಿರುದ್ಧ ಜನರು ದಂಡೇಳುವ ಪರಿಸ್ಥಿತಿಯಲ್ಲಿ ಉಪ ಚುನಾವಣೆ ಘೋಷಣೆ ಆಗಿದೆ. ಬಾಗಲಕೋಟೆ ಕ್ಷೇತ್ರದ ಪ್ರಜ್ಞಾವಂತ ಮತದಾರರು ಈ ಬಾರಿ ಬಿಜೆಪಿಯನ್ನು ಬೆಂಬಲಿಸುತ್ತಾರೆ. ಹಿರಿಯರಾದ ವೀರಣ್ಣ ಚರಂತಿಮಠ್ ಅವರು ಗೆದ್ದು ಬಂದೇ ಬರುತ್ತಾರೆಂಬ ವಿಶ್ವಾಸ ಇದೆ ಎಂದು ಹೇಳಿದರು.

## ಪೆಟ್ರೋಲ್,ಡಿಸೇಲ್ ಕೊರತೆ ಸುಳ್ಳು ಸುದ್ದಿ ಸಾರ್ವಜನಿಕರು ಭಯಪಡುವ ಅಗತ್ಯವಿಲ್ಲ – ಜಿಲ್ಲಾಧ್ಯಕ್ಷ ಸುಭಾಷ್ ಪಾಟೀಲ



**ಬೆಳಗಾವಿ ವಾರ್ತೆ**

**ಬೆಳಗಾವಿ :** ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡುತ್ತಿರುವ ಸುಳ್ಳು ಸುದ್ದಿಗಳ ಪರಿಣಾಮವಾಗಿ ಪೆಟ್ರೋಲ್ ಬಂಕ್‌ಗಳ ಮುಂದೆ ಜನರು ಪೆಟ್ರೋಲ್ ಪಡೆಯಲು ಮುಗಿಬಿದ್ದು ಆತಂಕದ ವಾತಾವರಣ ನಿರ್ಮಾಣವಾಗಿದೆ.

ಭಾರತಕ್ಕೆ ಅಗತ್ಯವಿರುವ ಕಚ್ಚಾ ತೈಲ, ಅನಿಲ ಮತ್ತು ರಸಗೊಬ್ಬರಗಳು ಯುದ್ಧದ ಸವಾಲುಗಳ ನಡುವೆಯೂ, ಪೆಟ್ರೋಲ್, ಡೀಸೆಲ್ ಮತ್ತು ಗ್ಯಾಸ್ ಪೂರೈಕೆಯಲ್ಲಿ ವ್ಯತ್ಯಯವಾಗದಂತೆ ನಮ್ಮ ಸರ್ಕಾರ ನಿರಂತರ ಶ್ರಮಿಸುತ್ತಿದೆ ಸಾರ್ವಜನಿಕರು ಭಯ ಪಡುವ ಅಗತ್ಯವಿಲ್ಲ ಎಂದು ಸ್ವತಃ ಪ್ರಧಾನಿ ಶ್ರೀ ನರೇಂದ್ರ ಮೋದಿ ಅವರೇ ಹೇಳಿದ್ದಾರೆ.

ಇತ್ತೀಚೆಗೆ ಪೆಟ್ರೋಲ್ ಕೊರತೆ ಉಂಟಾಗಲಿದೆ ಎಂಬ ವದಂತಿ ಸಾಮಾಜಿಕ ಜಾಲತಾಣಗಳಲ್ಲಿ ವ್ಯಾಪಕವಾಗಿ ಹರಿದಾಡುತ್ತಿದ್ದಂತೆ, ನಾಗರಿಕರು ಆತಂಕಗೊಂಡು ಬಂಕ್‌ಗಳತ್ತ ದೌಡಾಯಿಸುತ್ತಿದ್ದಾರೆ. ಇದರಿಂದ ಅನಾವಶ್ಯಕ ಗೊಂದಲ ಮತ್ತು ಜನಸಂದಣಿ ಉಂಟಾಗಿದೆ.

ಸಂಬಂಧಿತ ಅಧಿಕಾರಿಗಳು ಹಾಗೂ ಪೆಟ್ರೋಲ್ ವಿತರಕರು ಇಂತಹ ಯಾವುದೇ ಕೊರತೆ ಇಲ್ಲವೆಂದು ಸ್ಪಷ್ಟಪಡಿಸಿದ್ದು, ಜನರು ಸುಳ್ಳು ಸುದ್ದಿಗಳಿಗೆ ಕಿವಿಗೊಡಬಾರದು ಎಂದು ಬಿಜೆಪಿ ಜಿಲ್ಲಾಧ್ಯಕ್ಷ ಸುಭಾಷ್ ಪಾಟೀಲ ಅವರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಬಂಕ್‌ಗಳ ಮುಂದೆ ಸಾಲು ಸಾಲಾಗಿ ನಿಂತ ವಾಹನ ಸವಾರರು; ಪ್ರೆಟ್ರೋಲ್ ಸಿಗದೆ ಪರದಾಟ



**ಬೆಳಗಾವಿ ವಾರ್ತೆ**

**ಬೆಳಗಾವಿ:** ಅಮೆರಿಕ, ಇಸ್ರೇಲ್ ಹಾಗೂ ಇರಾನ್ ದೇಶದ ನಡುವೆ ನಡೆಯುತ್ತಿರುವ ಸಂಘರ್ಷ ದ ಹಿನ್ನೆಲೆ ಸಂಕೇಶ್ವರ ಪಟ್ಟಣದ ಪೆಟ್ರೋಲ್ ಬಂಕ್ ಗಳಲ್ಲಿ ಪ್ರೆಟ್ರೋಲ್ ಖಾಲಿಯಾಗಿ ಪೆಟ್ರೋಲ್ ದೊರೆಯದ ಹಿನ್ನೆಲೆಯಲ್ಲಿ ಬಂಕ್ ಗಳ ಮುಂದೆ ವಾಹನ ಸವಾರರು ಸಾಲು ಸಾಲಾಗಿ ನಿಂತು ಪ್ರೆಟ್ರೋಲ್ ಸಿಗದೆ ಪರದಾಡುವ ಪರಿಸ್ಥಿತಿ ಎದುರಾಗಿದೆ.

ನಗರದ ಕೆಲವು ಪೆಟ್ರೋಲ್ ಬಂಕ್ ಗಳಲ್ಲಿ ಪ್ರೆಟ್ರೋಲ್ ಸಿಗದೆ ವಾಹನ ಸವಾರರು ಪರಾದಾಡುತ್ತಿದ್ದು, ಕೆಲವು ಬಂಕ್ ಗಳು ಪೆಟ್ರೋಲ್ ಇಲ್ಲದೆ ಬಂದಾಗಿವೆ ಎನ್ನಲಾಗಿದೆ. ಆದರೆ ನಗರದ ಕೆಲವಡೆ ಬಂಕ್ ನಲ್ಲಿ ಪೆಟ್ರೋಲ್ ಇರುವದರಿಂದ ಬಂಕ್ ಗೆ ಪೆಟ್ರೋಲ್ ಗಾಗಿ ಸವಾರರು ಮುಗಿಬಿದ್ದಿದ್ದಾರೆ. ಮೂಖ್ಯವಾಗಿ ಕೆಲವರು ದೂರದ ಊರುಗಳಿಗೆ ತೆರಳಬೇಕಾದ ವಾಹನಗಳ ಸವಾರರು ಸರತಿ ಸಾಲಿನಲ್ಲಿ ನಿಂತು ಸುಸ್ತಾಗಿ ಹೋಗುವಂತಾ ಪರಿಸ್ಥಿತಿ ಎದುರಾಗಿದೆ.

## ಬೆಳಗಾವಿ ಜಿಲ್ಲೆಯಲ್ಲಿ ಸದ್ಯಕ್ಕೆ ಪೆಟ್ರೋಲ್, ಡೀಸೆಲ್‌ನ ಯಾವುದೇ ಕೊರತೆಯಿಲ್ಲ– ಜಿಲ್ಲಾಧಿಕಾರಿ ಮೊಹಮ್ಮದ್ ರೋಶನ



**ಬೆಳಗಾವಿ ವಾರ್ತೆ**

**ಬೆಳಗಾವಿ:** ಬೆಳಗಾವಿ ಜಿಲ್ಲೆಯಲ್ಲಿ ಸದ್ಯಕ್ಕೆ ಪೆಟ್ರೋಲ್ ಮತ್ತು ಡೀಸೆಲ್‌ನ ಯಾವುದೇ ಕೊರತೆಯಿಲ್ಲ ಎಂದು ಜಿಲ್ಲಾಧಿಕಾರಿ ಮೊಹಮ್ಮದ್ ರೋಶನ್ ಅವರು ಸಾರ್ವಜನಿಕರಿಗೆ ಭರವಸೆ ನೀಡಿದ್ದಾರೆ.

ಜಿಲ್ಲಾಧಿಕಾರಿ ಕಚೇರಿಯಲ್ಲಿ ನಡೆದ ಸುದ್ದಿ ಗೋಷ್ಠಿಯಲ್ಲಿ ಮಾತನಾಡಿದ ಅವರು, ತೈಲ ಅಭಾವದ ವದಂತಿಗಳಿಂ ದಾಗಿ ಜನರು ಪೆಟ್ರೋಲ್ ಬಂಕ್‌ಗಳ ಮುಂದೆ ಸಾಲುಗಟ್ಟಿ ನಿಲ್ಲುತ್ತಿದ್ದಾರೆ. ಜಿಲ್ಲೆಯಲ್ಲಿ ಸಾಕಷ್ಟು ತೈಲ ದಾಸ್ತಾನು ಲಭ್ಯವಿದೆ ಎಂದು ಸ್ಪಷ್ಟಪಡಿಸಿದ್ದಾರೆ.

ಜನರು ಗಾಬರಿಯಾಗುವ ಅಗತ್ಯವಿಲ್ಲ ಮತ್ತು ಅಗತ್ಯಕ್ಕಿಂತ ಹೆಚ್ಚು ಸಂಗ್ರಹಿಸಿಟ್ಟುಕೊಳ್ಳಬೇಡಿ ಎಂದು ಮನವಿ ಮಾಡಿದ ಅವರು, ಜಿಲ್ಲೆಯ ಎಲ್ಲಾ ಪೆಟ್ರೋ ಲ್ ಬಂಕ್‌ಗಳಿಗೆ ನಿರಂತರವಾಗಿ ಇಂಧನ ಸರಬರಾಜು ಮಾಡಲಾಗುತ್ತಿದೆ. ವದಂತಿ ಗಳಿಗೆ ಕಿವಿಗೊಡದೆ ಜಿಲ್ಲಾಡಳಿತ ಜತೆ ಸಹಕರಿಸುವಂತೆ ಅವರು ವಿನಂತಿಸಿದ್ದಾರೆ.

**ಬಾಟಲಿಗಳಲ್ಲಿ ಪೆಟ್ರೋಲ್ ಮಾರಾಟ ನಿಷೇಧ:** ಪೆಟ್ರೋಲ್ ಬಂಕ್‌ಗಳಲ್ಲಿ ಬಾಟಲಿ ಅಥವಾ ಯಾವುದೇ ಬಿಡಿ ಕ್ಯಾನ್‌ಗಳಲ್ಲಿ ಪೆಟ್ರೋಲ್ ನೀಡುವುದನ್ನು ಕಟ್ಟುನಿಟ್ಟಾಗಿ ನಿಷೇಧಿಸಲಾಗಿದೆ. ನಿಯಮ ಮೀರಿ ಬಾಟಲಿಗಳಲ್ಲಿ ಪೆಟ್ರೋಲ್ ನೀಡುವ ಪೆಟ್ರೋಲ್ ಬಂಕ್ ಮಾಲೀಕರ ವಿರುದ್ಧ ಪರವಾನಗಿ ರದ್ದತಿಯಂತಹ ಕಠಿಣ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಜಿಲ್ಲಾಧಿಕಾರಿಗಳು ಎಚ್ಚರಿಸಿದ್ದಾರೆ.

**ವದಂತಿ ಹರಡುವವರ ವಿರುದ್ಧ ಕಠಿಣ ಕಾನೂನು ಕ್ರಮ:** ಇಂಧನ ಅಭಾವದ ಬಗ್ಗೆ ಸುಳ್ಳು ಸುದ್ದಿ ಅಥವಾ ವದಂತಿಗಳನ್ನು ಹರಡುವವರ ವಿರುದ್ಧ ಕಠಿಣ ಕಾನೂನು ಕ್ರಮ ಜರುಗಿಸಲಾಗುವುದು. ಸೋಷಿಯಲ್ ಮೀಡಿಯಾ ಅಥವಾ ಇತರ ಮಾಧ್ಯಮಗಳ ಮೂಲಕ ಪೆಟ್ರೋಲ್, ಡೀಸೆಲ್ ಖಾಲಿಯಾಗಿದೆ ಎಂಬ ತಪ್ಪು ಮಾಹಿತಿ ಹರಡುವುದನ್ನು ಗಂಭೀರವಾಗಿ ಪರಿಗಣಿಸಲಾಗಿದೆ. ಸುಳ್ಳು ಸುದ್ದಿಯಿಂದಾಗಿ ಪೆಟ್ರೋಲ್ ಬಂಕ್‌ಗಳ ಮುಂದೆ ಜನಜಂ ಗುಳಿ ನಿರ್ಮಾಣವಾಗುತ್ತಿದ್ದು, ಸಾರ್ವಜ ನಿಕರು ಆತಂಕಕ್ಕೆ ಒಳಗಾಗಬಾರದು ಎಂದು ತಿಳಿಸಿದ್ದಾರೆ.

## ಹೋಮ್‌ಗಾರ್ಡ ಹೋಳಪ್ಪಾ ನೆಸರಗಿಗೆ ಶಾಸಕರಿಂದ ಸನ್ಮಾನ



**ಬೆಳಗಾವಿ ವಾರ್ತೆ**

**ಗೋಕಾಕ:** ತಾಲೂಕಿನ ಅಂಕಲಗಿ ಘಟಕ ಹೋಮ್‌ಗಾರ್ಡ ಆಗಿರುವ ಹೊಳೆಪ್ಪಾ ಬಸವಣ್ಣಿ ನೇಸರಗಿ ಅವರಿಗೆ 2025 ರ ಮುಖ್ಯಮಂತ್ರಿಗಳ ಸೇವಾ ಪದಕ ದೊರೆತಿರುವುದಕ್ಕಾಗಿ ಗೋಕಾಕ ಶಾಸಕರಾದ ರಮೇಶ ಜಾರಕಿಹೊಳಿ ಅವರು ನಗರದ ತಮ್ಮ ಗೃಹ ಕಚೇರಿಯಲ್ಲಿ ಸನ್ಮಾನಿಸಿ ಗೌರವಿಸಿದರು. ಹೊಳೆಪ್ಪಾ ನೇಸರಗಿ ಅವರ ಸಮರ್ಪಣಾ ಮನೋಭಾವವನ್ನು ಗುರುತಿಸುವುದು ಮತ್ತು ಪ್ರೋತ್ಸಾಹಿಸುವುದು. ದೀರ್ಘ ಕಾಲದ ಸೇವೆ ಬಂದೋಬಸ್ತ್ ಕರ್ತವ್ಯ, ತುರ್ತು ಸಂದರ್ಭಗಳಲ್ಲಿ ಅಗ್ನಿ ಸುರಕ್ಷತೆ, & ಶೌರ್ಯ ಪ್ರದರ್ಶಿಸಿದ ಕಾರಣ ಸಿಎಂ ಪದಕ ಲಭಿಸಿದ್ದು ಇಂಥಹ ಸಿಬ್ಬಂದಿಗಳಿಗೆ ಪ್ರಶಸ್ತಿಗಳು ಮತ್ತಷ್ಟು ಪುಷ್ಟಿ ನೀಡುತ್ತವೆ ಎಂದು ಶಾಸಕರು ಹೇಳಿದರು. ಈ ಸಂದರ್ಭದಲ್ಲಿ ಶಾಸಕರ ಆಪ್ತ ಸಹಾಯಕರಾದ ಭೀಮನಗೌಡ ಪೊಲೀಸ್ ಗೌಡರ , ಮುಖಂಡರಾದ ಲಕ್ಷ್ಮಣ ಜಡಗಿ, ಲಕ್ಕಪ್ಪ ತಳವಾರ, ಈರಪ್ಪ ನೇಸರಗಿ,ಶಾಂತು ಕೂಡಜೋಗಿ , ಸಂತೋಷ್ ಪೂಜಾರಿ, ಮಾರುತಿ ಬಾಗಡಿ , ಬಸವರಾಜ್ ಕುರುಪಿ ಸೇರಿದಂತೆ ಅನೇಕರು ಇದ್ದರು.

## ಸಿಎಂ ಪದಕ ಪಡೆದ ಹೋಮ್‌ಗಾರ್ಡ ಹೋಳಪ್ಪಾ ನೆಸರಗಿ



**ಬೆಳಗಾವಿ ವಾರ್ತೆ**

**ಗೋಕಾಕ:** ತಾಲೂಕಿನ ಅಂಕಲಗಿ ಘಟಕ ಹೋಮ್‌ಗಾರ್ಡ ಆಗಿರುವ ಹೋಳಪ್ಪಾ ಬಸವಣ್ಣಿ ನೆಸರಗಿ ಅವರಿಗೆ 2025 ರ ಮುಖ್ಯಮಂತ್ರಿಗಳ ಸೇವಾ ಪದಕ ಲಭಿಸಿದ್ದು ಬೆಂಗಳೂರಿನಲ್ಲಿ ನಡೆದ ಭವ್ಯ ಸಮಾರಂಭದಲ್ಲಿ ಹೋಳಪ್ಪಾ ಬಸವಣ್ಣಿ ನೆಸರಗಿ ಅವರಿಗೆ ಪದಕ ನೀಡಿ ಗೌರವಿಸಲಾಯಿತು.

ಗೃಹರಕ್ಷಕ ದಳದ ಸಿಬ್ಬಂದಿಗಳಿಗೆ ಅತ್ಯುತ್ತಮ ಸೇವೆ, ಶಿಸ್ತು, ಕರ್ತವ್ಯನಿಷ್ಠೆ ಮತ್ತು ಶೌರ್ಯಕ್ಕಾಗಿ ರಾಜ್ಯ ಸರ್ಕಾರವು ಮುಖ್ಯಮಂತ್ರಿಗಳ ಚಿನ್ನದ ಪದಕ ಅಥವಾ ಸೇವಾ ಪದಕಗಳನ್ನು ನೀಡಿ ಗೌರವಿಸುತ್ತದೆ

ಗೃಹರಕ್ಷಕ ದಳದ ಸಿಬ್ಬಂದಿಯ ಸಮರ್ಪಣಾ ಮನೋಭಾವವನ್ನು ಗುರುತಿಸುವುದು ಮತ್ತು ಪ್ರೋತ್ಸಾಹಿಸುವುದು. ದೀರ್ಘಕಾಲದ ಸೇವೆ ಬಂದೋಬಸ್ತ್ ಕರ್ತವ್ಯ, ತುರ್ತು ಸಂದರ್ಭಗಳಲ್ಲಿ ಅಗ್ನಿ ಸುರಕ್ಷತೆ, ಮತ್ತು ಶೌರ್ಯ ಪ್ರದರ್ಶಿಸಿದ ಕಾರಣ ಸಿಎಂ ಪದಕ ಲಭಿಸಿದೆ. . ಸಿಎಂ ಪದಕ ದೊರೆತಿರುವುದಕ್ಕಾಗಿ ಬೆಳಗಾವಿ ಜಿಲ್ಲಾ ಸಮಾದೇಷ್ಠರಾದ ಚನ್ನಪ್ಪಾ ಅಥಣಿ ಮತ್ತು ಉಪ ಸಮಾದೇಷ್ಠರು ಬಾಬಾಸಾಬ ಕಾಂಬಳೆ ಮತ್ತು ಬೋದಕರು ರವಿ ಮಾಳಗಿ ಆಫೀಸ್ ಎಫ್‌ಡಿಎ ಆನಂದ ನಾವಲಗಿ. ಮತ್ತು ಬೆಳಗಾವಿ ಜಿಲ್ಲೆಯ ಎಲ್ಲ ಯೂನಿಟ್ ಆಫೀಸರ್ ಮತ್ತು ಗೃಹ ರಕ್ಷಕರು ಮತ್ತು ಗೃಹ ರಕ್ಷಿಕಿಯರು ಶುಭ ಕೋರಿ ಗೌರವಿಸಿದರು.

# ಕನ್ನಡ ಸಾಹಿತ್ಯಕ್ಕೆ ದೇವರ ದಾಸಿಮಯ್ಯರ ಕೊಡುಗೆ ಅಪಾರ: ಪ್ರಕಾಶ ಹಳಿಯಾಳ



**ಬೆಳಗಾವಿ ವಾರ್ತೆ**

**ಧಾರವಾಡ:** ಕನ್ನಡ ಸಾಹಿತ್ಯಕ್ಕೆ ದೇವರ ದಾಸಿಮಯ್ಯರ ಕೊಡುಗೆ ಅಪಾರವಾಗಿದೆ. ಅವರು ವಚನ ಸಾಹಿತ್ಯವನ್ನು ರಚಿಸಿ, ಸಮಾಜಕ್ಕೆ ಮಾರ್ಗದರ್ಶನ ನೀಡಿದ್ದರು ಎಂದು ಹುಬ್ಬಳ್ಳಿ ಧಾರವಾಡ ಮಹಾನಗರ ಪಾಲಿಕೆ ವ್ಯಾಪ್ತಿಯ ಪಂಚ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷ ಪ್ರಕಾಶ ಹಳಿಯಾಳ ಅವರು ಹೇಳಿದರು.

ಅವರು ಇಂದು (ಮಾ.23) ಬೆಳಿಗ್ಗೆ ನಗರದ ಆಲೂರು ವೆಂಕಟರಾವ್ ಸಾಂಸ್ಕೃತಿಕ ಭವನದಲ್ಲಿ ಜಿಲ್ಲಾಡಳಿತ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋ ಗದಲ್ಲಿ ಜರುಗಿದ ಆದ್ಯ ವಚನಕಾರ ಶ್ರೀ ದೇವರ ದಾಸಿಮಯ್ಯ ಜಯಂತಿ ಕಾರ್ಯ ಕ್ರಮವನ್ನು ಉದ್ಘಾಟಿಸಿ, ಮಾತನಾಡಿದರು.

ದಾಸಿಮಯ್ಯ ಅವರ ವಚನಗಳು ಸರಳತೆ, ಸಮಾನತೆ ಹಾಗೂ ಭಕ್ತಿ ತತ್ವಗಳನ್ನು ಸಾರುತ್ತವೆ. ಅವರು ಜಾತಿ ಬೇಧವನ್ನು ವಿರೋಧಿಸಿ, ಮಾನವೀಯ ಮೌಲ್ಯಗಳನ್ನು ಉತ್ತೇಜಿಸಿದ ಮಹಾನ್ ಸಂತರು. ಅವರ ಸಂದೇಶಗಳು ಇಂದಿನ ಸಮಾಜದಲ್ಲಿಯೂ ಪ್ರಸ್ತುತವಾಗಿವೆ ಎಂದು ಅವರು ಹೇಳಿದರು. ಬೆಂಗಳೂರು ದೇವಾಂಗ ಸಮಾಜದ ಸಂಘಟನಾಕಾರ ರವೀಂದ್ರ ಪಾಟೀಲ ಅವರು ಮಾತನಾಡಿ, ಮಕ್ಕಳನ್ನು ಕೇವಲ ಆಟ-ಪಾಠಗಳಲ್ಲೇ ತೊಡಗಿಸುವುದರಿಂದ ಅವರ ಮನರಂಜನೆ ಮತ್ತು ಮೂಲಭೂತ ಶಿಕ್ಷಣ ಬೆಳೆಯುತ್ತದೆ.

ನಮ್ಮ ಪೂರ್ವಜರು ಯಾವ ರೀತಿಯ ವೃತ್ತಿಗಳನ್ನು ಮಾಡುತ್ತಿದ್ದರು, ಅವರು ಎದುರಿಸಿದ ಸವಾಲುಗಳು ಏನು, ಅವರು ಹೇಗೆ ಶ್ರಮಪಟ್ಟು ಜೀವನ ನಡೆಸಿದರು ಎಂಬುದನ್ನು ಮಕ್ಕಳಿಗೆ ವಿವರಿಸಿದರೆ, ಅವರು ಶ್ರಮದ ಮೌಲ್ಯವನ್ನು ಅರ್ಥಮಾಡಿಕೊಳ್ಳುತ್ತಾರೆ. ಇದರಿಂದ ಮಕ್ಕಳಲ್ಲಿ ಪರಿಶ್ರಮ, ಪ್ರಾಮಾಣಿಕತೆ ಮತ್ತು ಜವಾಬ್ದಾರಿತನದ ಗುಣಗಳು ಬೆಳೆಯುತ್ತವೆ ಎಂದು ಅವರು ಹೇಳಿದರು.

ಕಾರ್ಯಕ್ರಮದಲ್ಲಿ ದೇವಾಂಗ ಸಂಘ ಅಧ್ಯಕ್ಷ ಡಾ. ಕೆ.ಜಿ. ಬ್ಯಾಕೋಡಿ, ದೇವಾಂಗ ಸಂಘ ಅಧ್ಯಕ್ಷ ಲಕ್ಷ್ಮೀಕಾಂತ ಇಟ್ನಾಳ, ಧಾರವಾಡ ದೇವಾಂಗ ನೇಕಾರ ಅಭಿವೃದ್ಧಿ ಸಂಘದ ಅಧ್ಯಕ್ಷ ರವಿ ಲೋಲಿ, ಗರಗ ಹಾಗೂ ಹಂಗರಕಿ ದೇವಾಂಗ ಸಮಾಜದ ಅಧ್ಯಕ್ಷ ಜಗದೀಶ ಜವಳಿ ಅವರು ಮಾತನಾಡಿದರು.

ವೇದಿಕೆಯಲ್ಲಿ ದೇವಾಂಗ ಶಕ್ತಿ ಮಹಿಳಾ ಮಂಡಳದ ಅಧ್ಯಕ್ಷೆ ಡಾ. ರಾಧಾ ಅಶೋಕ ಗೌಡರ, ಬನಶಂಕರಿ ದೇವಾಂಗ ಸಂಘದ ಅಧ್ಯಕ್ಷ ಬಸವರಾಜ ಕುಸುಬಿ, ಸಮಾಜದ ಮುಖಂಡ ರಾಮು ತಾವರೆ ಉಪಸ್ಥಿತರಿದ್ದರು.

ಧಾರವಾಡ ಹಿರೇಮಲ್ಲೂರ ಈಶ್ವರನ ಮಹಾವಿದ್ಯಾಲಯ ಅಧ್ಯಾಪಕ ಡಾ. ಈರಣ್ಣ ಇಂಜಗನೇರಿ ಅವರು ಆದ್ಯ ವಚನಕಾರ ಶ್ರೀ ದೇವರ ದಾಸಿಮಯ್ಯ ಅವರ ಜೀವನ ಚರಿತ್ರೆ ಕುರಿತು ಕಾರ್ಯಕ್ರಮದಲ್ಲಿ ವಿಶೇಷ ಉಪನ್ಯಾಸ ನೀಡಿದರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಕುಮಾರ ಬೆಕ್ಕೇರಿ ಅವರು ಸ್ವಾಗತಿಸಿದರು. ರವಿ ಕುಲಕರ್ಣಿ ಅವರು ಕಾರ್ಯಕ್ರಮ ನಿರೂಪಿಸಿ, ವಂದಿಸಿದರು.

ಕಾರ್ಯಕ್ರಮದಲ್ಲಿ ಸಮುದಾಯದ ಗುರು ಹಿರಿಯರು, ಶಾಲಾ ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರು ಭಾಗವಹಿಸಿದ್ದರು.

## ಮಾರ್ಚ 26 ರಂದು ಅಸ್ಪೃಶ್ಯತೆ ನಿರ್ಮೂಲನೆ ಜಾಗೃತಿ ಕಾರ್ಯಕ್ರಮ

ಗದಗ: ಶಿರಹಟ್ಟಿ ತಾಲೂಕಾ ಆಡಳಿತ, ತಾಲೂಕ ಪಂಚಾಯತ, ಸಮಾಜ ಕಲ್ಯಾಣ ಇಲಾಖೆ, ಪೋಲೀಸ್ ಇಲಾಖೆ ಲಕ್ಷ್ಮೇಶ್ವರ ಇವರುಗಳ ಸಹಯೋಗದೊಂದಿಗೆ ಮಾರ್ಚ 26 ರಂದು ಸಂಜೆ 5.00 ಗಂಟೆಗೆ ಅಕ್ಕಿಗುಂದ ಗ್ರಾಮದಲ್ಲಿ ಅಸ್ಪೃಶ್ಯತೆ ನಿರ್ಮೂಲನೆ ಜಾಗೃತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗದ ಮುಖಂಡರು, ಸರ್ವ ಸದಸ್ಯರು, ಗಣ್ಯವ್ಯಕ್ತಿಗಳು, ಸಂಘ ಸಂಸ್ಥೆಯ ಪದಾಧಿಕಾರಿಗಳು ಮತ್ತು ಸಾರ್ವಜನಿಕರು ಈ ಜಾಗೃತಿ ಕಾರ್ಯಕ್ರಮದಲ್ಲಿ ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕು ಎಂದು ಶಿರಹಟ್ಟಿ ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಶ್ರೀ ದೇವರ ದಾಸಿಮಯ್ಯನವರ ಜಯಂತಿ

## ವಚನಗಳ ಮೂಲಕ ಸಮಾಜ ಸುಧಾರಣೆಗೆ ಶ್ರಮಿಸಿದ ಶ್ರೀ ದೇವರ ದಾಸಿಮಯ್ಯನವರು: ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್

**ಬೆಳಗಾವಿ ವಾರ್ತೆ**

ಗದಗ: ದೇವರ ದಾಸಿಮಯ್ಯನವರು ತಮ್ಮ ವಚನಗಳ ಮೂಲಕ ಸಮಾಜದಲ್ಲಿನ ಅಂಕುಡೊಂಕುಗಳನ್ನು ತಿದ್ದುವಲ್ಲಿ ಶ್ರಮಿಸಿದ್ದಾರೆ ಎಂದು ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್ ತಿಳಿಸಿದರು.

ಗದಗ ಬೆಟಗೇರಿಯ ಟರ್ನಲ್ ಪೇಟೆಯ ಶ್ರೀ ದೇವರ ದಾಸಿಮಯ್ಯ ವೇದಿಕೆಯಲ್ಲಿ ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ , ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಸೋಮವಾರ ಆದ್ಯ ವಚನಕಾರ ನೇಕಾರ ಸಂತ ಶ್ರೀ ದೇವರ ದಾಸಿಮಯ್ಯನವರ ಜಯಂತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.



ದೇವರ ದಾಸಿಮಯ್ಯನವರು 10 ನೇ ಶತಮಾತನದಲ್ಲಿನ ವಚನಕಾರರು. ಇವರು ನೇಕಾರ ಕಾಯಕದ ಮೂಲಕ ಜೀವನ ಸಾಗಿಸುತ್ತಿದ್ದರು. ತಮ್ಮ ಅರ್ಥಪೂರ್ಣ ವಚನಗಳ ಮೂಲಕ ಸಮಾಜಕ್ಕೆ ದೊಡ್ಡ ಕೊಡುಗೆ ಕೊಟ್ಟಿದ್ದಾರೆ. ತಮ್ಮ ವಚನಗಳಲ್ಲಿ ಭಕ್ತಿ ಹಾಗೂ ಕಾಯಕದ ಮಹತ್ವವನ್ನು ಸಾರಿದವರು. ದೇವರ ದಾಸಿಮಯ್ಯನವರ ತತ್ವಾದರ್ಶಗಳನ್ನು ಹಾಗೂ ಅವರ ವಚನಗಳ ಸಂದೇಶಗಳನ್ನು ಪ್ರತಿಯೊಬ್ಬರು ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್ ಹೇಳಿದರು.

ರಾಘವೇಂದ್ರ ಕೊಪ್ಪಳ ಅವರು ಉಪನ್ಯಾಸ ನೀಡಿ ಮಾತನಾಡುತ್ತಾ ಆದ್ಯ ವಚನಕಾರ ನೇಕಾರ ಸಂತ ದೇವರ ದಾಸಿಮಯ್ಯನವರು 10 ನೇ ಶತಮಾನದಲ್ಲಿ ಯಾದಗಿರಿ ಜಿಲ್ಲೆಯ ಸುರಪುರ ತಾಲೂಕಿನ ಮುದನೂರು ಎಂಬ ಗ್ರಾಮದಲ್ಲಿ ಜನಿಸಿದರು. ಮುದನೂರು ಗ್ರಾಮದಲ್ಲಿ ಹಲವಾರು ದೇವಾಲಯಗಳಿದ್ದು ಅದರಲ್ಲಿ ರಾಮಲಿಂಗೇಶ್ವರ ದೇವಸ್ಥಾನ ದೇವರ ದಾಸಿಮಯ್ಯನವರ ಅಚ್ಚುಮೆಚ್ಚಿನ ಸ್ಥಳವಾಗಿತ್ತು ಹಾಗೂ ಇವರು ರಾಮಲಿಂಗೇಶ್ವರನ ಆರಾಧಕರಾಗಿದ್ದರು. ದೇವರ ದಾಸಿಮಯ್ಯನವರ ಅಂಕಿನಾಮ ರಾಮನಾಥ ಆಗಿದೆ. ದಾಸಿಮಯ್ಯನ ಭಕ್ತಿಯಂತೆ ನಮ್ಮ ಭಕ್ತಿ ಇರಬೇಕು ಎಂದು ಜಗಜ್ಯೋತಿ ಬಸವಣ್ಣನವರು ತಮ್ಮ ವಚನಗಳಲ್ಲಿ ಹೇಳಿದ್ದಾರೆ. ದೇವರ ದಾಸಿಮಯ್ಯನವರು ಮುದನೂರಿನ ಸಮೀಪದಲ್ಲಿರುವ ಶೈವ ಕೇಂದ್ರವಾಗಿದ್ದ ಶ್ರೀಶೈಲದಲ್ಲಿದ್ದ ಶ್ರೀ ಚಂದ್ರಗುಂಡ ಶಿವಾಚಾರ್ಯ ಗುರುಕುಲದಲ್ಲಿ ವಿದ್ಯೆಯೊಂದಿಗೆ ಉತ್ತಮ ಸಂಸ್ಕಾರವನ್ನು ಪಡೆದು ಸುಜ್ಞಾನವಂತರಾದ ದೇವರ ದಾಸಿಮಯ್ಯನವರು ಯಾವುದನ್ನೂ ಪ್ರಶ್ನಿಸದೇ ಸ್ವೀಕರಿಸುವ ಮನೋಭಾವದವರಲ್ಲ. ಪ್ರಖರ ವೈಚಾರಿಕ ನೆಲೆಗಟ್ಟಿನ ಅಸದೃಶ ವ್ಯಕ್ತಿತ್ವವನ್ನು ಹೊಂದಿದ್ದರು. ನೇಕಾರಿಕೆ ಇವರ ಕುಲ ಕಸುಬಾಗಿತ್ತು. ಇವರ ಧರ್ಮಪತ್ನಿ ಶರಣೆ ದುಗ್ಗಳೆಯವರು ಸಹ ಶಿವಭಕ್ತಿ ಹಾಗೂ ಕುಲಕಸುಬನ್ನು ಚಾಚೂ ತಪ್ಪದೇ ಪಾಲಿಸುತ್ತಿದ್ದರು. ದೇವರ ದಾಸಿಮಯ್ಯನವರು ತಮ್ಮ ಅರ್ಥಪೂರ್ಣವಾದ ವಚನಗಳ ಮೂಲಕ ಸಮಾಜ ಸುಧಾರಣೆ ಮಾಡಿದವರು. ಇವರ ಕುರಿತು ಇನ್ನೂ ಹೆಚ್ಚಿನ ಅಧ್ಯಯನ ನಡೆಯಬೇಕಾಗಿದೆ ಎಂದು ದೇವರ ದಾಸಿಮಯ್ಯನವರ ಸಾಧನೆ ಕುರಿತು ವಿವರಿಸಿದರು.

ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕಿ ಶ್ರೀಮತಿ ನಂದಾ ಹಣಬರಟ್ಟಿ ಅವರು ಮಾತನಾಡಿ ಇಂದಿನ ಮಕ್ಕಳು ಶಿಕ್ಷಣಕ್ಕೆ ಹೆಚ್ಚಿನ ಒತ್ತು ಕೊಡುವ ಮೂಲಕ ಸಮಾಜದಲ್ಲಿ ಉನ್ನತ ಹುದ್ದೆ ಅಲಂಕರಿಸಬೇಕು. ಸರ್ಕಾರದಿಂದ ವಿವಿಧ ಯೋಜನೆಗಳ ಸೌಲಭ್ಯಗಳನ್ನು ಸಮಾಜದವರು ಪಡೆದುಕೊಳ್ಳಬೇಕು ಎಂದು ತಿಳಿಸಿದರು.

ಇದೇ ಸಂದರ್ಭದಲ್ಲಿ ಶೈಕ್ಷಣಿಕ ಕ್ಷೇತ್ರದಲ್ಲಿ ಸಾಧನೆ ಮಾಡಿದ ಹಾಗೂ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಸಮಾಜದ ಸಾಧಕರನ್ನು ಸನ್ಮಾನಿಸಲಾಯಿತು. ದೇವರ ದಾಸಿಮಯ್ಯ ಜಯಂತಿ ನಿಮಿತ್ತ ಏರ್ಪಡಿಸಲಾಗಿದ್ದ ವಚನಸ್ಪರ್ಧೆ ಹಾಗೂ ನಿಬಂಧ ಸ್ಪರ್ಧೆಯಲ್ಲಿನ ವಿಜೇತರಿಗೆ ಬಹುಮಾನವ ವಿತರಿಸಲಾಯಿತು.

ಕಾರ್ಯಕ್ರಮದಲ್ಲಿ ಗದಗ ಬೆಟಗೇರಿಯ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಜಿ, ನಗರಸಭೆ ಸದಸ್ಯರಾದ ರಾಘವೇಂದ್ರ ಯಳವತ್ತಿ, ಲಕ್ಷ್ಮೀ ಖಾಕಿ, ಪೂರ್ಣಿಮಾ ಭರದ್ವಾಜ್, ಗದಗ ಬೆಟಗೇರಿ ನಗರಸಭೆಯ ಪೌರಾಯುಕ್ತ ರಾಜಾರಾಮ ಪವಾರ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಬಸವರಾಜ ಬಳ್ಳಾರಿ, ದಶರಥರಾಜ ಕೊಳ್ಳಿ, ರಮೇಶ ಗಡ್ಡಿ, ಅಶೋಕ ಹೊನ್ನಳ್ಳಿ, ರಮೇಶ ಹತ್ತಿಕಾಳ, ಶ್ರೀನಿವಾಸ ಹುಬ್ಬಳ್ಳಿ, ಮಲ್ಲಿಕಾರ್ಜುನ ಐಲಿ, ಆರ್.ಕೆ.ಹುಬ್ಬಳ್ಳಿ, ಶಕುಂತಲಾ ಅಕ್ಕಿ ಸೇರಿದಂತೆ ಸಮಾಜದ ಮುಖಂಡರು, ಹಿರಿಯರು, ಗಣ್ಯರು, ಪದಾಧಿಕಾರಿಗಳು ಹಾಜರಿದ್ದರು.

ಅನಿಲ ಗಡ್ಡಿ ಪ್ರಾಸ್ತಾವಿಕವಾಗಿ ಮಾತನಾಡಿದರು. ದೊಡ್ಡಪ್ಪ ಮೂಲಿಮನಿ ಕಾರ್ಯಕ್ರಮ ನಿರೂಪಿಸಿದರು.

# ಶ್ರೀ ಮಹಿಮಾಂತಕ ಮನ್ನೀರೇಶ್ವರ ಕೃತಿ ಲೋಕಾರ್ಪಣೆ



**ಬೆಳಗಾವಿ ವಾರ್ತೆ**

ಮುದ್ದೇಬಿಹಾಳ: ತಾಲೂಕಿನ ಖಿಲಾರಹಟ್ಟಿ ಗ್ರಾಮದ ಆರಾಧ್ಯ ದೈವಗಳಾದ ಶ್ರೀ ಭೀರಲಿಂಗೇಶ್ವರ ಹಾಗೂ ಶ್ರೀ ಕಾಡಸಿದ್ದೇಶ್ವರ ಜಾತ್ರಾ ಮಹೋತ್ಸವ ಮತ್ತು ಉಚಿತ ಸಾಮೂಹಿಕ ವಿವಾಹ ಕಾರ್ಯಕ್ರಮದ ಪವಿತ್ರ ವೇದಿಕೆಯಲ್ಲಿ, ಯುವ ಲೇಖಕ ವಿರೇಶ ಗೂಡಲಮನಿ ರಚಿಸಿದ "ಶ್ರೀ ಮಹಿಮಾಂತಕ ಮನ್ನೀರೇಶ್ವರ" ಕೃತಿಯನ್ನು ಶಾಸಕ ಸಿ.ಎಸ್. ನಾಡಗೌಡರು ಲೋಕಾರ್ಪಣೆಗೊಳಿಸಿದರು.

**ಸಂಸ್ಕೃತಿ ಉಳಿಸುವ ಪ್ರಯತ್ನ:** ಕೃತಿ ಬಿಡುಗಡೆಗೊಳಿಸಿ ಮಾತನಾಡಿದ ಶಾಸಕರು ಹಾಗೂ ಕೆಎಸ್‌ಡಿಎಲ್ ಅಧ್ಯಕ್ಷರಾದ ಸಿ.ಎಸ್. ನಾಡಗೌಡರು, "ನಮ್ಮ ಮಣ್ಣಿನ ಇತಿಹಾಸ ಮತ್ತು ಜನಪದ ಸೊಗಡನ್ನು ಅಕ್ಷರ ರೂಪಕ್ಕಿಳಿಸಿ ಮುಂದಿನ ಪೀಳಿಗೆಗೆ ದಾಟಿಸುತ್ತಿರುವ ವಿರೇಶ ಗೂಡಲಮನಿ ಅವರ ಸಾಹಿತ್ಯಿಕ ಸೇವೆ ಶ್ಲಾಘನೀಯ. ಜಾತ್ರೆಯಂತಹ ಸಡಗರದ ನಡುವೆ ಇಂತಹ ಮೌಲಿಕ ಕೃತಿ ಬಿಡುಗಡೆಯಾಗಿರುವುದು ಅರ್ಥಪೂರ್ಣ," ಎಂದರು.

**ಲೇಖಕರ ಮನದಾಳ:** ಇದೇ ಸಂದರ್ಭದಲ್ಲಿ ಲೇಖಕ ವಿರೇಶ ಗೂಡಲಮನಿ ಮಾತನಾಡಿ, "ನಮ್ಮೂರಿನ ಸಮೃದ್ಧ ಇತಿಹಾಸ ಹಾಗೂ ಶ್ರೀಮಂತ ಜನಪದ ಹಿನ್ನೆಲೆಯನ್ನು ಆಧರಿಸಿ ಈ ಕೃತಿಯನ್ನು ರಚಿಸಲಾಗಿದೆ. ಈ ಕೃತಿ ಲೋಕಾರ್ಪಣೆಯಾಗಲು ಹಾಗೂ ನನ್ನ ಈ ಸಾಹಿತ್ಯಿಕ ಪ್ರಯತ್ನಕ್ಕೆ ಸಂಪೂರ್ಣ ಸಹಕಾರ ಮತ್ತು ಮಾರ್ಗದರ್ಶನ ನೀಡಿದ ಸಮಾಜಸೇವಕ ಎಂ.ಎನ್. ಮದರಿ ಸಾಹೇಬರಿಗೆ ನಾನು ಸದಾ ಋಣಿ. ಹಾಗೆಯೇ ಊರಿನ ಪ್ರತಿಯೊಬ್ಬ ಹಿರಿಯರು ಹಾಗೂ ಯುವಕರ ಪ್ರೋತ್ಸಾಹದಿಂದ ಇಂದು ಈ ಕಾರ್ಯ ಯಶಸ್ವಿಯಾಗಿದೆ," ಎಂದು ಭಾವುಕರಾಗಿ ನುಡಿದರು.

**ಪೂಜ್ಯರ ಆಶೀರ್ವಚನ:** ಕಾರ್ಯಕ್ರಮದಲ್ಲಿ ಅಗತೀರ್ಥದ ಜಗದ್ಗುರು ರೇವಣಸಿದ್ದೇಶ್ವರ ಶಾಂತಮಯ ಶ್ರೀಗಳು, ತಾಳಿಕೋಟೆಯ ಸಿದ್ದಲಿಂಗ ದೇವರು, ಸಿದ್ದನಕೊಳ್ಳದ ಡಾ. ಶಿವಕುಮಾರ ಶ್ರೀಗಳು, ಅಂಕಲಿಮಠದ ವೀರಭದ್ರ ಮಹಾಸ್ವಾಮಿಗಳು, ಯರಝರಿಯ ಮಲ್ಲಾರಲಿಂಗ ಪ್ರಭುಗಳು, ಸರೂರಿನ ಶಿವಯ್ಯ ಗುರುವಿನವರು, ಖಿಲಾರಹಟ್ಟಿಯ ರಮಾನಂದ ಸ್ವಾಮೀಜಿ ಸೇರಿದಂತೆ ಹತ್ತಕ್ಕೂ ಹೆಚ್ಚು ಮಠಾಧೀಶರು ಪಾಲ್ಗೊಂಡು ಆಶೀರ್ವಚನ ನೀಡಿದರು.

ಈ ಕಾರ್ಯಕ್ರಮದ ವೇದಿಕೆಯಲ್ಲಿ ಜಾತ್ರೆ ಕಮೀಟಿ ಅಧ್ಯಕ್ಷ ಎನ್ ಎಸ್ ಪೂಜಾರಿ, ಮಾಜಿ ಜಿಲ್ಲಾ ಪಂ ಅಧ್ಯಕ್ಷ ಗಂಗಾಧರ ನಾಡಗೌಡ (ಮುನ್ನಾಧಣಿ) ಸಮಾಜ ಸೇವಕ ಹಾಗೂ ಕಾಂಗ್ರೆಸ್ ಮುಖಂಡ ಶಾಂತಗೌಡ ಪಾಟೀಲ ನಡಹಳ್ಳಿ, ವೈ.ಎಚ್. ವಿಜಯಕರ್, ಬಿ ಕೆ ಬಿರಾದಾರ,ಕೆ.ಆರ್. ಬಿರಾದಾರ, ಎನ್.ಎಸ್. ಪಾಟೀಲ ಬಪ್ಪರಗಿ, ಬಿ.ಎಸ್. ಶಿರೋಳ, ಬಿ.ಜಿ. ಜಗ್ಗಲ್, ಶ್ರೀದೇವಿ ಮದರಿ, ಸಂಗಮ್ಮ ದೇವರಳ್ಳಿ,ಕಿರಣ ಮದರಿ,ರವಿ ಜಗಲಿ,ಶಶಿ ನೆರಬೆಂಚಿ, ಬಸವರಾಜ ಗುಡ್ಲಮನಿ, ಹಾಗೂ ಗ್ರಾಮದ ಹಿರಿಯರು ಸೇರಿದಂತೆ ಉಪಸ್ಥಿತರಿದ್ದರು.

# ಸಮಗ್ರ ಕೃಷಿ ಪದ್ಧತಿ ಅವಲೋಕನ




**ಬೆಳಗಾವಿ ವಾರ್ತೆ**

**ನವಲಗುಂದ:** ತಾಲ್ಲೂಕಿನ ನಾಗನೂರ ಗ್ರಾಮದ ಸಹಜ ಕೃಷಿಕ ಶೌಕತಅಲಿ ಲಂಬೂನವರ ಸಮಗ್ರ ಕೃಷಿ ತೋಟಕ್ಕೆ ನರಗುಂದ ತಾಲ್ಲೂಕಿನ ನರಗುಂದ, ವಾಸನ, ಸಂಕದಾಳ,ಕನಕಿಕೊಪ್ಪ ಗ್ರಾಮಗಳ ರೈತರು ಭೇಟಿ ನೀಡಿದರು.

ಲಂಬೂನವರ ಅವರು ಅಳವಡಿಸಿಕೊಂಡ ಸಮಗ್ರ ಕೃಷಿ ಪದ್ಧತಿಯಲ್ಲಿನ ಸಾವಯವ ಕೃಷಿ ಘಟಕ, ಮೀನುಗಾರಿಕೆ, ಕೋಳಿ ಸಾಕಾಣಿಕೆ, ಎರೆಹುಳು ಗೊಬ್ಬರ ಉತ್ಪಾದನಾ ಘಟಕ, ಸಾಗವಾನಿ, ಶ್ರೀಗಂಧ, ರಕ್ತ ಚಂದನ, ಬೇವು, ನುಗ್ಗೆ, ನೀರಸೇಬು, ಪೇರಲ, ದಾಳಿಂಬೆ ಅಲ್ಲದೆ ವಿವಿಧ ತರಕಾರಿ ಹಾಗೂ ಹತ್ತು ಹಲವಾರು ಸಸ್ಯಗಳ ಕುರಿತು ಶೌಕತಅಲಿ ಲಂಬೂನವರಿಂದ ಮಾಹಿತಿ ಪಡೆದರು.ವಿದ್ಯುತ್ ಬಳಕೆ ಇಲ್ಲದೇ ಸಂಪೂರ್ಣ ಸೌರಶಕ್ತಿ ಮೂಲಕ ನೀರೆತ್ತುವ ಪಂಪ್ ಹಾಗೂ ಹನಿ ನೀರಾವರಿ ಪದ್ಧತಿ ವೀಕ್ಷಿಸಿದರು. ನರಗುಂದ ಕೃಷಿ ಇಲಾಖೆಯ ಸಿಬ್ಬಂದಿ ಎಸ್.ಬಿ.ಸಥೆ , ರೈತರಾದ ಬಸನಗೌಡ ಅಣ್ಣಿಗೇರಿ, ಸತೀಶ ಪಾಟೀಲ, ಭೀಮಪ್ಪ ದೊಡಮನಿ, ಮಲ್ಲನಗೌಡ ಚೆನ್ನಪ್ಪಗೌಡ್ರ ಸೇರಿ 30ಕ್ಕೂ ಹೆಚ್ಚು ರೈತರು ಇದ್ದರು

# ಶ್ರೀಶೈಲ ಪಾದಯಾತ್ರಿಗಳಿಗೆ ಸಮಾಜ ಸೇವಕ ಇಬ್ರಾಹಿಂ ಮುಲ್ಲಾ ಅವರಿಂದ ಸನ್ಮಾನ

**ಬೆಳಗಾವಿ ವಾರ್ತೆ**

**ಮುದ್ದೇಬಿಹಾಳ:** ಪಟ್ಟಣದ ಪ್ರಸಿದ್ಧ ಶ್ರೀ ಬನಶಂಕರಿ ದೇವಿ ದೇವಸ್ಥಾನದಲ್ಲಿ ರವಿವಾರ ಹಮ್ಮಿಕೊಂಡಿದ್ದ ಕಾರ್ಯಕ್ರಮದಲ್ಲಿ, ಶ್ರೀಶೈಲ ಮಲ್ಲಿಕಾರ್ಜುನ ಜ್ಯೋತಿರ್ಲಿಂಗದ ದರ್ಶನಕ್ಕೆ ಪಾದಯಾತ್ರೆ ಹೊರಟಿದ್ದ ಭಕ್ತರನ್ನು ಸತ್ಕರಿಸಿ ಬೀಳ್ಕೊಡಲಾಯಿತು.



ಪಟ್ಟಣದ ಸಮಾಜ ಸೇವಕ ಇಬ್ರಾಹಿಂ ಮುಲ್ಲಾ ಅವರು ಪಾದಯಾತ್ರಿಗಳಾದ ಸಿದ್ದಲಿಂಗಯ್ಯ ಕಲ್ಯಾಣಮಠ, ಗುಂಡು ಹೆಬ್ಬಾಳ ಹಾಗೂ

ಸಂಗಯ್ಯ ಅವರಿಗೆ ಶಾಲು ಹೊದಿಸಿ, ಮಾಲೆ ಹಾಕಿ ಭಕ್ತಿಯಿಂದ ಸನ್ಮಾನಿಸಿ ಶುಭ ಹಾರೈಸಿದರು.

**ಸೌಹಾರ್ದತೆಗೆ ಸಾಕ್ಷಿ:** ಈ ಸಂದರ್ಭದಲ್ಲಿ ಮಾತನಾಡಿದ ಇಬ್ರಾಹಿಂ ಮುಲ್ಲಾ ಅವರು, "ಪಾದಯಾತ್ರೆಯು ಭಕ್ತಿ ಮತ್ತು ಶಿಸ್ತಿನ ಸಂಕೇತ. ಪಾದಯಾತ್ರಿಗಳ ಶ್ರದ್ಧೆ ಎಲ್ಲರಿಗೂ ಮಾದರಿ. ಶ್ರೀ ಮಲ್ಲಿಕಾರ್ಜುನ ಸ್ವಾಮಿಯು ಎಲ್ಲರಿಗೂ ಆಯುಷ್ಯ, ಆರೋಗ್ಯ ನೀಡಿ ಕಾಪಾಡಲಿ," ಎಂದು ಹಾರೈಸಿದರು. ಈ ಸನ್ಮಾನ ಕಾರ್ಯಕ್ರಮವು ಪಟ್ಟಣದ ಕೋಮು ಸೌಹಾರ್ದತೆಗೆ ಸಾಕ್ಷಿಯಾಯಿತು.

ಈ ಸಂದರ್ಭದಲ್ಲಿ ಮುದ್ದೇಬಿಹಾಳ ಸರ್ಕಾರಿ ಆಸ್ಪತ್ರೆಯ ನಾಮನಿರ್ದೇಶಿತ ಸದಸ್ಯರಾದ ರಫೀಕ್ ಶಿರೋಳ, ಪತ್ರಕರ್ತ ಶಂಕರ ಹೆಬ್ಬಾಳ, ರಿಯಲ್ ಎಸ್ಟೇಟ್ ಉದ್ಯಮಿಗಳಾದ ಸಿದ್ದಲಿಂಗಯ್ಯ ಕಲ್ಯಾಣಮಠ ಹಾಗೂ ರಾಮು ಪೂಜಾರಿ ಉಪಸ್ಥಿತರಿದ್ದು ಪಾದಯಾತ್ರಿಗಳಿಗೆ ಶುಭ ಕೋರಿದರು. ಕಾರ್ಯಕ್ರಮದಲ್ಲಿ ಶ್ರೀ ಬನಶಂಕರಿ ದೇವಸ್ಥಾನದ ಭಕ್ತಾದಿಗಳು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.





**ಬೆಳಗಾವಿ ವಾರ್ತೆ**

**ಬೆಳಗಾವಿ:** ನಗರದಲ್ಲಿ ಹಾಗೂ ಕೆಲವು ತಾಲೂಕುಗಳಲ್ಲಿ ಗುಡುಗು ಸೇರದಂತೆ ಧಾರಾಕಾರ ಮಳೆಯಿಂದಾಗಿ ಮನೆಗಳಿಗೆ ನೀರು ನುಂಗಿದೆ. ಸುಮಾರು ಒಂದು ಗಂಟೆಗಳ ಕಿತ್ತು ಹೆಚ್ಚು ಕಾಲ ಮಳೆ ಸುರಿದಿದೆ. ಮಳೆಯಿಂದಾಗಿ ಸಾರ್ವಜನಿಕರು ಹಾಗೂ ಬೈಕ್ ಸವಾರರು ಅಲ್ಲಲ್ಲಿ ಬೈಕ್ ನಿಲ್ಲಿಸಲು ಪರದಾಡುವ ಪರಿಸ್ಥಿತಿ ನಿರ್ಮಾಣಗೊಂಡಿದೆ.

# ಒಳಮೀಸಲಾತಿ ರದ್ಧತಿಗೆ ಮನವಿ



**ಬೆಳಗಾವಿ ವಾರ್ತೆ**

**ಲಕ್ಷ್ಮೇಶ್ವರ:** ಎಸ್. ಸಿ. ಒಳ ಮೀಸಲಾತಿಯನ್ನು ರದ್ದುಪಡಿಸುವಂತೆ ಒತ್ತಾಯಿಸಿ ತಾಲೂಕಾ ತಾಂಡಾದ ಯುವಕರು ತಹಶೀಲ್ದಾರರಿಗೆ ಮನವಿ ಸಲ್ಲಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ತುಕ್ಕಪ್ಪ ಪೂಜಾರ ಸಂತೋಷ್ ರಾಥೋಡ್ ಪರಮೇಶ ಲಮಾಣಿ ಅವರು ಒಳ ಮೀಸಲಾತಿಯಿಂದ ಸಣ್ಣ ಸಣ್ಣ ಸಮಾಜದ ಸಮುದಾಯ ಗಳಿಗೆ ಅನ್ಯಾಯವಾಗಲಿದೆ ಸರ್ಕಾರ ಈ ಕೂಡಲೇ ಒಳ ಮೀಸಲಾತಿಯನ್ನು ರದ್ದು ಮಾಡಿ ನ್ಯಾಯ ಒದಗಿಸಬೇಕು ಎಂದು ಹೇಳಿದರು. ಲಂಬಾಣಿ ಬಂಜಾರ ಸಮುದಾಯದ ಜನರು ಆರ್ಥಿಕವಾಗಿ ಸಾಮಾಜಿಕವಾಗಿ ಶೈಕ್ಷಣಿಕವಾಗಿ ಹಿಂದುಳಿದಿದ್ದು ಈ ಜನಾಂಗ ಇದುವರೆಗೂ ತಮ್ಮ ಬದುಕು ಕಟ್ಟಿಕೊಳ್ಳಲು ಮಂಗಳೂರು ಗೋವಾ ಉಡುಪಿ ಕೇರಳ ಮುಂಬೈ ಮುಂತಾದ ಪ್ರದೇಶಗಳಿಗೆ ವಲಸೆ ಹೋಗುತ್ತಿದ್ದಾರೆ ಬಡ ಮತ್ತು ಹಿಂದುಳಿದ ಈ ಜನಾಂಗದ ಜೊತೆಗೆ ಭಜಂತ್ರಿ ಕೊರಮ ಕೊಂಚ ಬೋವಿ ಸೇರಿದಂತೆ ಹಲವು ಸಣ್ಣ ಸಣ್ಣ ಸಮಾಜಗಳಿಗೆ ಒಳ ಮೀಸಲಾತಿಯಿಂದ ಅನ್ಯಾಯವಾಗಲಿದೆ ಎಂದರು. ಮನವಿ ಪತ್ರವನ್ನು ಸ್ವೀಕರಿಸಿದ ಗ್ರೇಡ್ –2 ತಹಸಿಲ್ದಾರ್ ಮಂಜುನಾಥ ಅಮಾಸಿಯವರು ಮನವಿಯನ್ನು ಜಿಲ್ಲಾಧಿಕಾರಿಗಳ ಮುಖಾಂತರ ಸರಕಾರಕ್ಕೆ ಕಳುಹಿಸುವುದಾಗಿ ಹೇಳಿದರು.

ಈ ಸಂದರ್ಭದಲ್ಲಿ ಗಿರೀಶ ಲಮಾಣಿ ಕಿರಣ ಲಮಾಣಿ ಗಣೇಶ ಲಮಾಣಿ ಕೃಷ್ಣ ಲಮಾಣಿ ಉಮೇಶ್ ಸಂತೋಷ ಲಮಾಣಿ ವೆಂಕಪ್ಪ ಸೇರಿದಂತೆ ಅನೇಕ ಯುವಕರಿದ್ದರು.

# ಉಪ್ಪಿನಬೆಟಗೇರಿಯಲ್ಲಿ "ರೊಟ್ಟಿ ಜಾತ್ರೆ"

**ಬೆಳಗಾವಿ ವಾರ್ತೆ**

**ಧಾರವಾಡ(ಉಪ್ಪಿನಬೆಟಗೇರಿ):** ಧಾರವಾಡ ತಾಲೂಕಿನ ಉಪ್ಪಿನಬೆಟಗೇರಿಯ ಶ್ರೀ ಗುರು ವಿರೂಪಾಕ್ಷೇಶ್ವರ ಜಾತ್ರಾ ಮಹೋತ್ಸವ ಅಕ್ಷರಶಃ ರೊಟ್ಟಿ ಜಾತ್ರೆಯಾಗಿ ಮಾರ್ಪಟ್ಟಿದೆ.

ಬುಟ್ಟಿ ಬುಟ್ಟಿ ಹೊತ್ತುಕೊಂಡು ತಾಯಂದಿರು ಮಠದ ಕಡೆಗೆ ಸಾಗುತ್ತಿರುವ ದೃಶ್ಯಗಳು ಗ್ರಾಮದಲ್ಲಿ ಸಾಮಾನ್ಯ ಎನ್ನುವಂತಿದೆ. ಈಗಾಗಲೇ ಮಠದಲ್ಲಿ ರಾಶಿ ರಾಶಿ ರೊಟ್ಟಿಗಳು ಸಂಗ್ರಹವಾಗಿದ್ದು, ಸೋಮವಾರದವರೆಗೂ ಮಹಿಳೆಯರು ರೊಟ್ಟಿ ತರಲಿದ್ದಾರೆ.

ಜಾತ್ರಾ ಮಹೋತ್ಸವದ "ಲವಣಗಿರಿ ಉತ್ಸವ"ದ ಅಂಗವಾಗಿ 9 ದಿನಗಳವರೆಗೆ ಜರುಗಿದ ಶರಣರ ಜೀವನ ದರ್ಶನ ಪ್ರವಚನ ಶನಿವಾರ ಮಹಾಮಂಗಲವಾಗಿದ್ದು, ಸೋಮವಾರ ಶ್ರೀ ಗುರು ವಿರೂಪಾಕ್ಷೇಶ್ವರ ರಥೋತ್ಸವವು ವಿಜೃಂಭಣೆಯಿಂದ ನೆರವೇರಲಿದೆ.

ಜಾತ್ರಾ ಮಹೋತ್ಸವವನ್ನು ರೊಟ್ಟಿ ಜಾತ್ರೆಯನ್ನಾಗಿ ಮಾಡೋಣ ಎಂಬ ಹಿರಿಯರ ನಿರ್ಧಾರದಂತೆ ಪ್ರತಿ ಮನೆಯಿಂದ ಕೈಲಾದಷ್ಟು ರೊಟ್ಟಿಯನ್ನು ಬುಟ್ಟಿಯಲ್ಲಿ ಹೊತ್ತುಕೊಂಡು ಶ್ರೀಮಠಕ್ಕೆ ತಂದು



ಮುಟ್ಟಿಸುವ ಮೂಲಕ ಮಹಿಳೆ ಯರು ಅಜ್ಜನ ಜಾತ್ರೆಗೆ ವಿಶೇಷ ಕಳೆ ತಂದಿದ್ದಾರೆ.

ಕಳೆದ ಒಂದು ವಾರದಿಂದ ಶ್ರೀಮಠದಲ್ಲಿ ರೊಟ್ಟಿ ಸಂಗ್ರಹಿಸಲಾಗುತ್ತಿದ್ದು, ಸೋಮವಾರದ ಹೊತ್ತಿಗೆ ಅಂದಾಜು ಹತ್ತು ಸಾವಿರಕ್ಕಿಂತಲೂ ಹೆಚ್ಚು ರೊಟ್ಟಿ ಸಂಗ್ರಹವಾಗಲಿದೆ ಎಂದು ಜಾತ್ರಾ ಮಹೋತ್ಸವ ಸಮಿತಿಯ ಉಸ್ತುವಾರಿಗಳು ತಿಳಿಸಿದ್ದಾರೆ. ಸೋಮವಾರ ನಡೆಯಲಿರುವ ಅಜ್ಜನ ಜಾತ್ರೆಯ ಮಹಾಪ್ರಸಾದದಲ್ಲಿ ಜಾತ್ರಾ ಮಹೋತ್ಸವ ಸಮಿತಿಯವರ ಸಿಹಿ ಪ್ರಸಾದ ಮತ್ತು ಅನ್ನ ಪ್ರಸಾದದ ಜೊತೆಗೆ ಮಹಿಳೆಯರು ತಂದಿರುವ ಜೋಳದ ರೊಟ್ಟಿಯೊಂದಿಗೆ ಜುಣಕದ ಪಲ್ಲೆಯ ಪ್ರಸಾದ ಸಕಲ ಸದ್ಭಕ್ತರಿಗೆ ದೊರಕಲಿದೆ. ಯುವಕರು ಮತ್ತು ತಾಯಂ ದಿರ ಈ ರೊಟ್ಟಿ ಜಾತ್ರೆಯ ಸಂಕಲ್ಪಕ್ಕೆ ಸಕಲ ಭಕ್ತಗಣ ಕೈಜೋಡಿಸಿದ್ದು, ಈ ಮೂಲಕ 12ನೇ ಶತಮಾನದ ಬಸವಾದಿ ಶಿವಶರಣರ ಕಲ್ಪನೆಯ ಪ್ರಸಾದ ಸೇವೆಯ ಆಶಯ ಇಲ್ಲಿನ ಭಕ್ತರು ಸಾಕಾರಗೊ ಳಿಸುತ್ತಿದ್ದಾರೆ ಎಂದು ಶ್ರೀಮಠದ ಕುಮಾರ ವಿರೂಪಾಕ್ಷ ಸ್ವಾಮೀಜಿ ಹರ್ಷ ವ್ಯಕ್ತಪಡಿಸಿದ್ದಾರೆ.

# ಗರ್ಭಕಂಠ ಕ್ಯಾನ್ಸರ್ ನಿರೋಧಕ ಲಸಿಕಾ ಕಾರ್ಯಕ್ರಮ

**ಬೆಳಗಾವಿ ವಾರ್ತೆ**

**ಲಕ್ಷ್ಮೇಶ್ವರ:** ಪಟ್ಟಣದ ಸಮುದಾಯ ಆರೋಗ್ಯ ಕೇಂದ್ರದಲ್ಲಿ ಸೋಮವಾರ ಗರ್ಭಕಂಠ ಕ್ಯಾನ್ಸರ್ ನಿರೋಧಕ ಲಸಿಕಾ ಕಾರ್ಯಕ್ರಮಕ್ಕೆ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿ ಶ್ರೀಕಾಂತ ಕಾಟೆವಾಲೆ ಚಾಲನೆ ನೀಡಿದರು.



ಆರೋಗ್ಯ ಕೇಂದ್ರದಲ್ಲಿ 14ರಿಂದ 15 ವರ್ಷದ ಒಳಗಿನ ಬಾಲಕಿಯರಿಗೆ ಉಚಿತವಾಗಿ ಎಚ್. ಪಿ. ವಿ. ಲಸಿಕೆಯನ್ನು ಹಾಕಲಾಗುತ್ತಿದೆ ದೇಶದ ಮಹಿಳೆಯರನ್ನು ಕಾಡುವ ಕ್ಯಾನ್ಸರ್ ಗಳಲ್ಲಿ ಗರ್ಭಕಂಠದ ಕ್ಯಾನ್ಸರ್ ಒಂದಾಗಿದೆ ಈ ಕ್ಯಾನ್ಸರ್ ತಡೆಯುವ ನಿಟ್ಟಿನಲ್ಲಿ ಹ್ಯೂಮನ್ ಪ್ಯಾಪಿಲೋಮ್ ವೈರಸ್ ಲಸಿಕಾ ಕಾರ್ಯಕ್ರಮವನ್ನು ಸರ್ಕಾರ ಉಚಿತವಾಗಿ ಹಮ್ಮಿಕೊಂಡಿದ್ದು ಕಡ್ಡಾಯವಾಗಿ 14 ರಿಂದ 15 ವರ್ಷದ ಬಾಲಕಿಯರಿಗೆ ಈ ಲಸಿಕೆಯನ್ನು ಹಾಕಿಸಲು ಮುಂದಾಗಬೇಕು ಎಂದು ಹೇಳಿದ್ದಾರೆ. ಸೋಮವಾರ ಒಂದೇ ದಿನ 45ಕ್ಕೂ ಹೆಚ್ಚು ಬಾಲಕಿಯರಿಗೆ ಈ ಲಸಿಕೆಯನ್ನು ಹಾಕಲಾಗಿದೆ. ಈ ಕಾರ್ಯಕ್ರಮದಲ್ಲಿ ಆಶಾ ಕಾರ್ಯ ಕರ್ತೆಯರು ಅತ್ಯಂತ ಆಸಕ್ತಿಯಿಂದ ಬಾಲಕಿಯರನ್ನು ಶಾಲೆಗಳಿಂದ ಕರೆತಂದು ಎಚ್ ಪಿ ವಿ ಲಸಿಕೆಯನ್ನು ಹಾಕಿಸಲು ಶಾಲೆಗಳಿಂದ ಆಸ್ಪತ್ರೆಗೆ ಕರೆತರುವಲ್ಲಿ ಮುಂದಾಗಿದ್ದಾರೆ.

ಪ್ರತಿನಿತ್ಯವೂ ಆಸ್ಪತ್ರೆಯಲ್ಲಿ ಎಚ್ ಪಿ ವಿ ಲಸಿಕೆಯನ್ನು ಹಾಕಲಾಗುತ್ತಿದ್ದು 14 ರಿಂದ 15 ವರ್ಷದ ಬಾಲಕಿಯರಿಗೆ ಅತ್ಯಂತ ಉಪಯುಕ್ತ ವಾಗಿದ್ದು ಖಾಸಗಿ ಆಸ್ಪತ್ರೆಗಳಲ್ಲಿ ಇದೇ ಲಸಿಕೆಗೆ2500 ರೂಗಳಿಂದ 3000 ವರೆಗೆ ಹಾಕಲಾಗುತ್ತಿದೆ ಎಂದು ಸರ್ಕಾರ ಈ ಯೋಜನೆಯನ್ನು ಉಚಿತವಾಗಿ ಮಾಡುತ್ತಿದ್ದು ಇದರ ಲಾಭ ಪಡೆಯಬೇಕು ಎಂದು ಹೇಳಿದರು.

ಸರ್ಕಾರದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಮಾರ್ಗಸೂಚಿಯಕ್ಕೆ ಇದನ್ನು ಯುದ್ಧೋಪಾದಿಯಲ್ಲಿ ಲಸಿಕಾ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗುತ್ತಿದೆ ಎಂದರು.

ಈ ಸಂದರ್ಭದಲ್ಲಿ ಆಶಾ ಕಾರ್ಯಕರ್ತೆಯರು ಆಸ್ಪತ್ರೆ ಸಿಬ್ಬಂದಿ ವರ್ಗದವರು ಇದ್ದರು.

# LPG ಕೊರತೆ – ಸಾಲದ ಒತ್ತಡಕ್ಕೆ ಹೊಟೇಲ್ ಮಾಲೀಕ ಆತ್ಮಹತ್ಯೆ

**ಬೆಳಗಾವಿ ವಾರ್ತೆ**

**ಬೆಳಗಾವಿ (ಹುಕ್ಕೇರಿ):** ಸಾಲದ ಒತ್ತಡ ಹಾಗೂ ವ್ಯವಹಾರ ಸಂಕಷ್ಟದಿಂದ ಮನನೊಂದು ಹೊಟೇಲ್ ಉದ್ಯಮಿ ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ಹುಕ್ಕೇರಿ ಪಟ್ಟಣದಲ್ಲಿ ಬೆಳಕಿಗೆ ಬಂದಿದೆ.

ಹುಕ್ಕೇರಿ ಹಳೆಯ ಬಸ್ ನಿಲ್ದಾಣದ ಸಮೀಪದ "ಹನುಮಾನ್ ಹೊಟೇಲ್" ಮಾಲೀಕ ರಾಮ ಹಳ್ಳೂರಿ (ಸುಮಾರು 45) ಅವರು ತಮ್ಮದೇ ಹೊಟೇಲ್‌ನಲ್ಲಿ ಆತ್ಮಹತ್ಯೆ ಮಾಡಿಕೊಂಡಿರುವುದು ಪೊಲೀಸ್ ಮೂಲಗಳಿಂದ ದೃಢಪಟ್ಟಿದೆ.



**ವ್ಯವಹಾರ ಸಂಕಷ್ಟ – ಆತ್ಮಹತ್ಯೆಗೆ ಕಾರಣವೇ?:** ಕಳೆದ ಕೆಲವು ದಿನಗಳಿಂದ ಹೊಟೇಲ್‌ಗೆ ವಾಣಿಜ್ಯ ಎಲ್‌ಪಿಜಿ ಸಿಲಿಂಡರ್ ದೊರೆಯದೆ, ಹೋಟೆಲ್ ಕಾರ್ಯಾಚರಣೆ ಸ್ಥಗಿತಗೊಂಡಿತ್ತು. ಇದರಿಂದ ಆದಾಯ ಸಂಪೂರ್ಣವಾಗಿ ಕುಂಠಿತಗೊಂಡಿದ್ದು, ಸಾಲದ ಕಂತುಗಳು ಹಾಗೂ ಬಡ್ಡಿಯನ್ನು ತೀರಿಸಲು ಸಾಧ್ಯವಾಗದ ಪರಿಸ್ಥಿತಿ ನಿರ್ಮಾಣವಾಗಿತ್ತು.

ಸ್ಥಳೀಯರ ಪ್ರಕಾರ, ರಾಮ ಹಳ್ಳೂರಿ ಹಲವು ವರ್ಷಗಳಿಂದ ಹೋಟೆಲ್ ವ್ಯವಹಾರ ನಡೆಸುತ್ತಿದ್ದು, ಇತ್ತೀಚಿನ ದಿನಗಳಲ್ಲಿ ಹಣಕಾಸಿನ ಸಮಸ್ಯೆಗಳು ಹೆಚ್ಚಾಗಿದ್ದವು. ಸಾಲಗಾರರ ಒತ್ತಡ ದಿನದಿಂದ ದಿನಕ್ಕೆ ಹೆಚ್ಚಾಗುತ್ತಿದ್ದ ಹಿನ್ನೆಲೆಯಲ್ಲಿ ಅವರು ಮಾನಸಿಕವಾಗಿ ಕುಗ್ಗಿ ಈ ಕೃತ್ಯಕ್ಕೆ ಮುಂದಾಗಿದ್ದಾರೆ ಎನ್ನಲಾಗಿದೆ. ಹುಕ್ಕೇರಿ ಪೊಲೀಸರು ಪ್ರಕರಣ ದಾಖಲಿಸಿ ತನಿಖೆ ಆರಂಭಿಸಿದ್ದಾರೆ.

ಇದೇ ವೇಳೆ, ಸ್ಥಳೀಯ ವ್ಯಾಪಾರಿಗಳು ವಾಣಿಜ್ಯ ಎಲ್‌ಪಿಜಿ ಸಿಲಿಂಡರ್‌ಗಳ ಸರಬರಾಜಿನಲ್ಲಿ ಉಂಟಾಗಿರುವ ವ್ಯತ್ಯಯಗಳ ಕುರಿತು ಆಕ್ರೋಶ ವ್ಯಕ್ತಪಡಿಸಿದ್ದು, ಸರಬರಾಜು ವ್ಯವಸ್ಥೆಯನ್ನು ಸರಿಪಡಿಸಲು ಸರ್ಕಾರ ತಕ್ಷಣ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದ್ದಾರೆ.

# ಮಹಿಳಾ ನೌಕರರ ಆರೋಗ್ಯ ಸಶಕ್ತತೆ ಆಡಳಿತದ ಅಡಿಪಾಯ: ಜಿಲ್ಲಾಧಿಕಾರಿ ಪ್ರತಿಪಾದನೆ



**ಬೆಳಗಾವಿ ವಾರ್ತೆ**

**ವಿಜಯನಗರ (ಹೊಸಪೇಟೆ):** ಮಹಿಳಾ ನೌಕರರು ಕಚೇರಿ ಕೆಲಸ ಮತ್ತು ಮನೆಯ ಜವಾಬ್ದಾರಿಗಳೆರಡನ್ನೂ ಸಮರ್ಥವಾಗಿ ನಿಭಾಯಿಸುತ್ತಿದ್ದಾರೆ. ಆದರೆ ಕಚೇರಿ ಕೆಲಸದ ಒತ್ತಡದ ಓಟದಲ್ಲಿ ತಮ್ಮ ಆರೋಗ್ಯದ ಕಡೆಗೆ ಗಮನಹರಿಸುತ್ತಿಲ್ಲ. ಆರೋಗ್ಯವಂತ ನೌಕರರಿಂದ ಮಾತ್ರ ಸಾರ್ವಜನಿಕರಿಗೆ ಉತ್ತಮ ಸೇವೆ ನೀಡಲು ಸಾಧ್ಯ ಎಂದು ಜಿಲ್ಲಾಧಿಕಾರಿ ಕವಿತಾ ಎಸ್. ಮನ್ನಿಕೇರಿ ಅಭಿಪ್ರಾಯ ವ್ಯಕ್ತಪಡಿಸಿದರು.

ನಗರದ ಇನ್ನರ್ ವ್ಹೀಲ್ ಕ್ಲಬ್ ಆಫ್ ಹೊಸಪೇಟೆ ಹಾಗೂ ಆಯುಷ್ ಇಲಾಖೆ ಸಹಯೋಗದೊಂದಿಗೆ ಸೋಮವಾರ ರೋಟರಿ ಆಸ್ಪತ್ರೆಯಲ್ಲಿ ಜಿಲ್ಲಾಡಳಿತ ಮತ್ತು ಜಿಲ್ಲಾ ಪಂಚಾಯತ್‌ನ ಮಹಿಳಾ ಸಿಬ್ಬಂದಿಗಳಿಗೆ ಆಯೋಜಿಸಲಾಗಿದ್ದ ಮಹಿಳಾ ನೌಕರರಿಗೆ ವಿಶೇಷ ವೈದ್ಯಕೀಯ ತಪಾಸಣೆ ಶಿಬಿರ' ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಆರೋಗ್ಯವಂತರಾಗಿರಲು ಮಹಿಳಾ ನೌಕರರು ಕನಿಷ್ಠ ಆರು ತಿಂಗಳಿಗೊಮ್ಮೆ ಸಮಗ್ರ ಆರೋಗ್ಯ ತಪಾಸಣೆ ಮಾಡಿಸಿಕೊಳ್ಳಬೇಕು ಎಂದು ಕಿವಿಮಾತು ಹೇಳಿದ ಅವರು, ಕೆಲಸದ ಒತ್ತಡವು ದೈಹಿಕ ಕಾಯಿಲೆಗಳಿಗಿಂತ ಮಾನಸಿಕ ನೆಮ್ಮದಿಯನ್ನು ಹಾಳು ಮಾಡುತ್ತದೆ. ಆದ್ದರಿಂದ ಪ್ರತಿಯೊಬ್ಬ ಮಹಿಳಾ ನೌಕರರು ದಿನದ ಅರ್ಧ ಗಂಟೆಯನ್ನಾದರೂ ಯೋಗ, ಧ್ಯಾನಕ್ಕೆ ಮೀಸಲಿಡಬೇಕು. ಇದರಿಂದ ರಕ್ತದೊತ್ತಡ ಮತ್ತು ಮಧುಮೇಹದಂತಹ ಕಾಯಿಲೆ ನಿಯಂತ್ರಿಸಬಹುದು. ಇತ್ತೀಚಿನ ದಿನಗಳಲ್ಲಿ ಮಹಿಳೆಯರಲ್ಲಿ ಕಾಣಿಸಿಕೊಳ್ಳುತ್ತಿರುವ ಕ್ಯಾನ್ಸರ್ ಹಾಗೂ ಇತರ ಸ್ತ್ರೀಸಂಬಂಧಿ ಕಾಯಿಲೆಗಳ ಬಗ್ಗೆ ಮುನ್ನೆಚ್ಚರಿಕೆ ವಹಿಸಬೇಕು. ಆರೋಗ್ಯದಲ್ಲಿ ಏನಾದರೂ ಏರುಪೇರು ಉಂಟಾದಲ್ಲಿ ಯಾವುದೇ ಮುಜುಗರವಿಲ್ಲದೇ ತಜ್ಞ ವೈದ್ಯರಲ್ಲಿ ಸಮಾಲೋಚನೆ ನಡೆಸಬೇಕು. ಆರಂಭಿಕ ಹಂತದಲ್ಲಿಯೇ ಕಾಯಿಲೆ ಪತ್ತೆಯಾದರೆ ಅದಕ್ಕೆ ತಕ್ಕ ಪರಿಹಾರ ಕಂಡುಕೊಳ್ಳಲು ಸಹಕಾರಿಯಾಗಲಿದೆ. ಪ್ರತಿಯೊಬ್ಬರೂ ಇಂತಹ ವೈದ್ಯಕೀಯ ತಪಾಸಣಾ ಶಿಬಿರದ ಸದುಪಯೋಗ ಪಡೆದುಕೊಳ್ಳಬೇಕು ಎಂದು ಕಿವಿಮಾತು ಹೇಳಿದರು. ಈ ವೇಳೆ ಇನ್ನರ್ ವ್ಹೀಲ್ ಕ್ಲಬ್ ಆಫ್ ಹೊಸಪೇಟೆ ಸಂಸ್ಥೆಯ ಅಧ್ಯಕ್ಷೆ ನೈಮಿಷಾ, ಆಯುಷ್ ಇಲಾಖೆಯ ವೈದ್ಯಾಧಿಕಾರಿ ಡಾ. ಮುನಿವಾಸುದೇವ ಸೇರಿದಂತೆ ವಿವಿಧ ಇಲಾಖೆ ಅಧಿಕಾರಿ ಹಾಗೂ ಸಿಬ್ಬಂದಿಗಳು ಇದ್ದರು.

# ಸಚಿವ ಶಿವರಾಜ ತಂಗಡಗಿ ವಿರುದ್ಧ ತಪ್ಪು ಸಂದೇಶದ ಹೇಳಿಕೆ : ಗ್ಯಾರಂಟಿ ಸಮಿತಿ ಜಿಲ್ಲಾಧ್ಯಕ್ಷ ರೆಡ್ಡಿ ಶ್ರೀನಿವಾಸ

**ಬೆಳಗಾವಿ ವಾರ್ತೆ**

**ಕೊಪ್ಪಳ :** ಆರ್ಯ ಈಡಿಗ ಸಮಾಜದ ಗುರುಗಳಾದ ಪ್ರಣಾವನಂದ ಸ್ವಾಮಿಗಳು ಕೊಪ್ಪಳ ಜಿಲ್ಲಾ ಉಸ್ತುವಾರಿ ಸಚಿವ ಶಿವರಾಜ ತಂಗಡಗಿ ವಿರುದ್ಧ ತಪ್ಪು ಸಂದೇಶದ ಹೇಳಿಕೆ ನೀಡಿದ್ದಾರೆ ಎಂದು ಗ್ಯಾರಂಟಿ ಸಮಿತಿ ಜಿಲ್ಲಾಧ್ಯಕ್ಷ ರೆಡ್ಡಿ ಶ್ರೀನಿವಾಸ ಆಕ್ರೋಶ ವ್ಯಕ್ತಪಡಿಸಿದರು.




ಸ್ವಾಮಿಗಳು ಏ.6 ರಂದು ಸಚಿವರ ಮನೆ ಮುಂದೆ ಪ್ರತಿಭಟನೆ ಮಾಡುವುದಾಗಿ ನೀಡಿರುವ ಹೇಳಿಕೆಯನ್ನು ಸಚಿವರ ಬೆಂಬಲಿಗರಾದ ನಾವುಗಳು ಖಂಡಿಸುತ್ತೇವೆ. ಸ್ವಾಮಿಗಳು ಸಮಾಜದ ಶ್ರೇಯೋಭಿವೃದ್ಧಿಗೆ ಶ್ರಮಿಸುತ್ತಿರುವುದನ್ನು ಸ್ವಾಗತಿಸುತ್ತೇವೆ. ಸಚಿವರ ವಿರುದ್ಧ ಮಾತನಾಡುವುದನ್ನು ನಾವು ಖಂಡಿಸುತ್ತೇವೆ ಎಂದರು.

ಸೋಮವಾರ ನಗರದ ಕಾರ್ಯನಿರತ ಪತ್ರಕರ್ತರ ಸಂಘದ ಪತ್ರಿಕಾ ಭವನದಲ್ಲಿ ಸುದ್ದಿಗೊಷ್ಟಿ ನಡೆಸಿ ಅವರು ಮಾತನಾಡಿದರು.

ಆರ್ಯ ಈಡಿಗ ಸಮಾಜದ ಪ್ರಣಾವನಂದ ಸ್ವಾಮಿಗಳು ಈಡಿಗ ಸಮಾಜದ ಅಭಿವೃದ್ಧಿಗೆ ಹಲವು ಬೇಡಿಕೆಗಳೊಂದಿಗೆ ಬೀದರನಿಂದ ಬೆಂಗಳೂರವರೆಗೆ ಪಾದಯಾತ್ರೆ ಮಾಡಿದ್ದಾರೆ. ಈ ಸಂದರ್ಭದಲ್ಲಿ ಕೊಪ್ಪಳ ಜಿಲ್ಲಾ ಉಸ್ತುವಾರಿ ಸಚಿವ ಶಿವರಾಜ ತಂಗಡಗಿ ಅವರು ಸಹ ಸಹಕಾರ ನೀಡಿ ನಮ್ಮ ಸಮಾಜ ಬೆಂಗಳೂರಿಗೆ ತೆರಳಲು ಬೆಂಬಲ ನೀಡಿದ್ದಾರೆ.

ಬೆಂಗಳೂರಿನಲ್ಲಿ ನಡೆದ ಪ್ರತಿಭಟನೆ ಸಂದರ್ಭದಲ್ಲಿ ಆಗಮಿಸಿ ಸ್ವಾಮಿಗಳ ಬೇಡಿಕೆಯನ್ನು ಮುಖ್ಯಮಂತ್ರಿಗಳ ಗಮನಕ್ಕೆ ತರುವ ಕೆಲಸ ಮಾಡಿದ್ದಾರೆ. ಮತ್ತು ಮುಖ್ಯಮಂತ್ರಿಗಳು ಹಾಗೂ ನಮ್ಮ ಸಮಾಜದ ಸಚಿವರು, ಶಾಸಕರೊಂದಿಗೆ ಚರ್ಚಿಸಿ ಅಧಿವೇಶನದ ನಂತರ ಈಡಿಗ ಬೇಡಿಕೆಗಳನ್ನು ಈಡೇರಿರುವ ಭರವಸೆ ನೀಡಿದ್ದಾರೆ.

ಆದರೆ ಪ್ರಣಾವನಂದ ಸ್ವಾಮಿಗಳು ಕೊಪ್ಪಳಕ್ಕೆ ಆಗಮಿಸಿ ಸುದ್ದಿಗೋಷ್ಟಿಯಲ್ಲಿ ಸಚಿವ ಶಿವರಾಜ ತಂಗಡಗಿ ವಿರುದ್ಧ ಇಲ್ಲ ಸಲ್ಲದ ಆರೋಪ ಮಾಡಿದ್ದಾರೆ.

ಸಚಿವರಾಗಿ ಅವರು ತಮ್ಮ ಜವಬ್ದಾರಿ ನಿಭಾಯಿಸಿದ್ದಾರೆ. ಸರಕಾರಕ್ಕೆ ಕಾಲವಕಾಶ ನೀಡದೇ ತಮ್ಮ ಮನಸ್ಸಿಗೆ ಬಂದಂತೆ ಮುಖ್ಯಮಂತ್ರಿಗಳು, ಸಚಿವರನ್ನು ನಿಂದನೆ ಮಾಡಿದರೆ ಹೇಗೆ. ಸಚಿವ ಶಿವರಾಜ ತಂಗಡಗಿ ಅವರು ಕನಕಗಿರಿ ಕ್ಷೇತ್ರದ ಈಡಿಗ ಸಮಾಜ ಹೆಚ್ಚಿರುವ ಬಸವಣ್ಣ ಕ್ಯಾಂಪ್, ಹೆಬ್ಬಾಳ ಕ್ಯಾಂಪ್‌ಗಳಿಗೆ ಕೋಟಿಗಟ್ಟಲೆ ಖರ್ಚು ಮಾಡಿ ರಸ್ತೆ ಮಾಡಿಸಿದ್ದಾರೆ. ಮತ್ತು ನಮ್ಮ ಸಮಾಜಕ್ಕೆ ಎಲ್ಲಾ ರೀತಿಯ ಸಹಕಾರ ನೀಡುತ್ತಿದ್ದಾರೆ. ಇದನ್ನು ತಿಳಿದುಕೊಳ್ಳದೇ ಸ್ವಾಮಿಗಳು ಸಚಿವರ ಬಗ್ಗೆ ಸಿಂಗಲ್ ವರ್ಡ್ ಉಪಯೋಗಿಸಿ ಮಾತನಾಡಿರುವುದು ನಮಗೆಲ್ಲ ಬೇಸರವಾಗಿದೆ. ಈಡಿಗ ಸಮಾಜದ ಬೇಡಿಕೆ ಈಡೇರಿಸುವುದಾಗಿ ಮುಖ್ಯಮಂತ್ರಿಗಳು ಭರವಸೆ ನೀಡಿದ್ದರೂ ಸಚಿವ ಶಿವರಾಜ ತಂಗಡಗಿ ಮನೆ ಮುಂದೆ ಪ್ರತಿಭಟನೆ ಮಾಡುವುದಾಗಿ ಸ್ವಾಮಿಗಳು ತಿಳಿಸಿರುವುದು ಸಚಿವರ ಬೆಂಬಲಿಗ ಈಡಿಗ ಸಮಾಜದವರೆಲ್ಲರೂ ವಿರೋಧಿಸುತ್ತಿದ್ದೇವೆ.

ಅವರು ನಡೆಸುವ ಪ್ರತಿಭಟನೆಯಲ್ಲಿ ನಾವು ಭಾಗವಹಿಸುವುದಿಲ್ಲ. ಸ್ವಾಮಿಗಳು ರಾಜಕಾರಣಿಗಳಂತೆ ಮಾತನಾಡದೇ ಸಮಾಜದ ಅಭಿವೃದ್ಧಿಗೆ ಸೌಜನ್ಯದಿಂದ ಮಾತನಾಡಬೇಕು ಎಂದು ರೆಡ್ಡಿ ಶ್ರೀನಿವಾಸಿ ಮನವಿ ಮಾಡಿದ ಅವರು ಕಾಂಗ್ರೆಸ್ ಮುಖಂಡ ಹೆಚ್.ಆರ್.ಶ್ರೀನಾಥ ಅವರು ಸಚಿವರ ವಿರುದ್ಧ ಮಾತನಾಡಿರುವ ಸಂಗತಿ ಗೊತ್ತಿಲ್ಲ ಎಂದು ಸ್ಪಷ್ಟನೆ ನೀಡಿದರು.

# ಸ್ತ್ರೀ ಪುರುಷ ಸಮಾನರೆಂದ ದಾಸಿಮಯ್ಯ: ಗಾದೆಪ್ಪ




**ಬೆಳಗಾವಿ ವಾರ್ತೆ**

**ಬಳ್ಳಾರಿ:** ನಗರದ ಸಾಂಸ್ಕೃತಿಕ ಸಮುಚ್ಚಯದಲ್ಲಿನ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಹೊಂಗಿರಣ ಸಭಾಂಗಣದಲ್ಲಿ ಜಿಲ್ಲಾಡಳಿತದಿಂದ ಆಯೋಜಿಸಿದ್ದ ಆದ್ಯ ವಚನಕಾರ ದೇವರ ದಾಸಿಮಯ್ಯ ಜಯಂತಿ ನಡೆಯಿತು.

ಕಾರ್ಯಕ್ರಮ ಉದ್ಘಾಟನೆಯನ್ನು ಮೇಯರ್ ಗಾದೆಪ್ಪ ಉದ್ಘಾಟನೆ ಮಾಡಿ, ದೇವರು ದಾಸಿಮಯ್ಯ ನೇಕಾರ ಸಮಾಜದ ವಚನಕಾರರಾಗಿದ್ದಾರೆ ಇವರು ವಿಶ್ವ ಗುರು ಬಸವಣ್ಣನವರ ಅನುಭವ ಮಂಟಪದಲ್ಲಿದ್ದರು, ಸ್ತ್ರೀ – ಪುರುಷ ಭೇದ ಭಾವ ಇಲ್ಲದೆ ಎಲ್ಲರೂ ಸಮಾನ ಎಂದು ಸಾರಿದವರೆಂದರು. ಶಿಕ್ಷಕ ಅಮಾತಿ ಬಸವ ರಾಜ್ ದೇವರ ದಾಸಿಮಯ್ಯ ಅವರ ಕುರಿತು ಉಪನ್ಯಾಸ ನೀಡಿದರು. ಲಿಡ್ಕರ್ ಅಧ್ಯಕ್ಷ ಮುಂಡ್ರಿಗಿ ನಾಗರಾಜ್, ಚೇಂಬರ್ ಆಫ್ ಕಾಮರ್ಸ್ ಅಧ್ಯಕ್ಷ ಅವ್ವಾರು ಮಂಜುನಾಥ್, ಹೋರಾಟಗಾರರಾದ ಸಿರಿಗೇರಿ ಪನ್ನರಾಜ್ ಮೊದಲಾದವರು ಇದ್ದರು.

# ಎರಡು ಆಟೋ ಪಲ್ಟಿ: ಯುವತಿ ಸಾವು; 20ಕ್ಕೂ ಹೆಚ್ಚು ಜನರಿಗೆ ಗಾಯ



**ಗಂಗಾವತಿ :** ನಿಯಂತ್ರಣ ತಪ್ಪಿ ಎರಡು ಆಟೋಗಳು ಭತ್ತದ ಗದ್ದೆಯಲ್ಲಿ ಒಂದರ ಹಿಂದೆ ಮತ್ತೊಂದು ಮಗುಚಿ ಬಿದ್ದ ಪರಿಣಾಮ 24 ವರ್ಷದ ಯುವತಿ ಮೃತಪಟ್ಟಿದ್ದು, 20ಕ್ಕೂ ಹೆಚ್ಚು ಜನರಿಗೆ ಗಾಯಗಳಾದ ಘಟನೆ ಹಿರೇಬೆಣಕಲ್ ಸಮೀಪ ಸೋಮವಾರ ಸಂಭವಿಸಿದೆ.

ಈ ಘಟನೆಯಲ್ಲಿ ಗಾಯಕ್ಕೀಡಾದವರನ್ನು ಇಲ್ಲಿನ ಉಪ ವಿಭಾಗದ ಆಸ್ಪತ್ರೆಗೆ ಸಾಗಿಸಿ ಚಿಕಿತ್ಸೆ ಕೊಡಿಸಲಾಗಿದ್ದು, ಗಂಭೀರ ಸ್ವರೂಪದಲ್ಲಿ ಗಾಯಗೊಂಡ ಇಬ್ಬರನ್ನು ಹೆಚ್ಚಿನ ಚಿಕಿತ್ಸೆಗಾಗಿ ಬಳ್ಳಾರಿಯ ವಿಮ್ಸ್ ಗೆ ಕಳುಹಿಸಿ ಕೊಡಲಾಗಿದೆ ಎಂದು ವೈದ್ಯರು ತಿಳಿಸಿದ್ದಾರೆ. ಮೃತಪಟ್ಟ ಯುವತಿಯನ್ನು ಇಲ್ಲಿನ ಮಹೆಬೂಬನಗರದ ಝುಂಡಾಕಟ್ಟಿ ಪ್ರದೇಶದ ನಿವಾಸಿ ರೇಷ್ಮಾ ಮಹೆಬೂಬಸಾಬ (24) ಎಂದು ಗುರುತಿಸಲಾಗಿದೆ.

ಘಟನೆಯಲ್ಲಿ ಗಂಭೀರವಾಗಿ ಗಾಯಗೊಂಡ ನಾಲ್ಕು ವರ್ಷದ ಆಯೇಶಾ ಹಾಗೂ ಮಿನಿಂರಾಜ್ ಎಂಬುವವರನ್ನು ಬಳ್ಳಾರಿಯ ವಿಮ್ಸ್ ಆಸ್ಪತ್ರೆಗೆ ಕಳುಹಿಸಲಾಯಿತು

# ಅರಭಾವಿಯ ಮಠದಲ್ಲಿ 'ಪುಣ್ಯಾರಣ್ಯ ಫಲ' ಗ್ರಂಥ ಬಿಡುಗಡೆ

**ಬೆಳಗಾವಿ ವಾರ್ತೆ**

**ಮೂಡಲಗಿ:** 'ಮಠಗಳು ನಾಡಿನ ಧಾರ್ಮಿಕ, ಸಾಂಸ್ಕೃತಿಕ ಹಾಗೂ ಶೈಕ್ಷಣಿಕ ಪ್ರಗತಿಯೊಂದಿಗೆ ಮಾನವೀಯ ಸಂಬಂಧಗಳನ್ನು ಪ್ರೇರೆಪಿಸುವ ಆಧ್ಯಾತ್ಮಿಕ ತಾಣಗಳಾಗಿವೆ' ಎಂದು ಕಟಕೋಳದ ವೀರಕ್ತಮಠದ ಸಚ್ಚಿದಾನಂದ ಸ್ವಾಮೀಜಿ ಹೇಳಿದರು.

ತಾಲ್ಲೂಕಿನ ಅರಭಾವಿಯ ಜಗದ್ಗುರು ದುರದುಂಡೀಶ್ವರ ಜಾತ್ರೆ ಪಲ್ಲಕ್ಕಿ ಉತ್ಸವದ ನಿಮಿತ್ತವಾಗಿ ಜರುಗಿದ ಧರ್ಮ ಚಿಂತನಗೋಷ್ಠಿ ಹಾಗೂ ಡಾ. ಸಿ.ಕೆ. ನಾವಲಗಿ ಅವರು ಸಂಪಾದಿಸಿದ 'ಪುಣ್ಯಾರಣ್ಯ ಫಲ' ಗ್ರಂಥ ಬಿಡುಗಡೆ ಸಮಾರಂಭದ ಸಮ್ಮುಖವಹಿಸಿ ಮಾತನಾಡಿದ ಅವರು ಜಾತ್ರೆ, ಉತ್ಸವಗಳು ಜನರಲ್ಲಿ ಸಾಮರಸ್ಯತೆಯನ್ನು ಬೆಳೆಸುತ್ತವೆ ಎಂದರು. ಜಾನಪದ ವಿದ್ವಾಂಸ ಡಾ. ಸಿ.ಕೆ. ನಾವಲಗಿ ಮಾತನಾಡಿ 400 ವರ್ಷಗಳ ಪೂರ್ವ ಇತಿಹಾಸವಿರುವ ಅರಭಾವಿ ಮಠದೊಂದಿಗೆ ಕಿತ್ತೂರ ದೊರೆ ಮಲ್ಲ ಸರ್ಜ ದೇಸಾಯಿ, ಕೆಂಗೇರಿಯ ಚಿದಾ ನಂದ ಅವಧೂತರು, ಕುರುಬೆಟ್ಟ ರಾಮಪ್ಪ ದೇಸಾಯರು, ನಿಪ್ಪಾಣಿಕ, ಕೊಲ್ಲಾಪುರ ಮಹಾರಾಜರು, ಅಳರಸರು, ಸಾಮಂತ ರು, ಮಾಂಡಲೀಕರೆಲ್ಲ ಸಂಪರ್ಕ ಸಾಮಿಪ್ಯ ಹೊಂದಿದ್ದರು ಎಂದು ಅಭಿಪ್ರಾಯಪಟ್ಟರು. ಅರಭಾವಿ ಮಠವು ಸಹ ಪುಸ್ತಕ ಪ್ರಕಟನೆಯಲ್ಲಿ ಗುರುತಿಸಿಕೊಂಡಿದ್ದು ಈಗಿನ ಮಠಾಧೀಶರಾದ ಗುರುಬಸವ ಲಿಂಗ ಸ್ವಾಮೀಜಿ ಪುಸ್ತಕ ಪ್ರಕಟನೆಗೆ ಆದ್ಯತೆ ನೀಡಿದ್ದರ ಫಲವಾಗಿ ಪುಣ್ಯಾರಣ್ಯ ಪುಷ್ಪ ತದನಂತರ ಈಗ ಪುಣ್ಯಾರಣ್ಯ ಫಲ ಗ್ರಂಥಗಳು ಲೋಕಾರ್ಪಣೆಗೊಂಡಿವೆ ಎಂದರು. ಸಾನ್ನಿಧ್ಯವಹಿಸಿದ್ದ ಹಂದಿಗುಂದ ಶಿವಾನಂದ ಸ್ವಾಮೀಜಿ ಪುಣ್ಯಾರಣ್ಯ ಪುಸ್ತಕವನ್ನು ಬಿಡುಗಡೆ ಮಾಡಿ ಮಾತನಾಡಿ ಅರಭಾವಿ ಮಠದಲ್ಲಿ ಮಾಸಿಕ




ಶಿವಾನು ಭವ ಗೋಷ್ಠಿಯ ವಿಷಯಗಳು ಅಕ್ಷರರೂ ಪದಲ್ಲಿರುವ ಪುಣ್ಯಾರಣ್ಯ ಫಲ ಸಿ.ಕೆ. ನಾವಲಗಿ ಅವರು ಅಚ್ಚುಕಟ್ಟಾಗಿ ಸಂಪಾದಿ ಸಿದ್ದಾರೆ. ಇವು ಶಾಶ್ವತ ಮೌಲ್ಯಗಳಾಗಿ ಉಳಿಯುತ್ತವೆ ಎಂದರು. ಸಾನ್ನಿಧ್ಯ ವಹಿಸಿ ದ್ದ ಮಠದ ಪೀಠಾಧಿಪತಿ ಗುರು ಬಸವ ಲಿಂಗ ಸ್ವಾಮೀಜಿ ಆಶೀರ್ವ ಚನ ನೀಡಿ ದರು. ಬೆಲ್ಲದಬಾಗೇ ವಾಡಿ ಯ ಶಿವಾ ನಂದ ಸ್ವಾಮೀಜಿ, ಮರೆಗುದ್ದಿ ಯ ರಾಮ ಕೃಷ್ಣ ದೇವರು ವೇದಿಕೆಯಲ್ಲಿದ್ದರು. ಸಾಧಕರಿಗೆ, ದಾನಿಗಳಿಗೆ ಸನ್ಮಾನ ಮಾಡಿದರು.

# ಗೋಕಾಕ ಉಪಕಾರಾಗೃಹದಲ್ಲಿ ಭದ್ರತಾ ಲೋಪ; ಕೈದಿಯೊಬ್ಬ ಕಾರಾಗೃಹ ಗೋಡೆ ಹಾರಿ ಪರಾರಿ



**ಬೆಳಗಾವಿ ವಾರ್ತೆ**

**ಗೋಕಾಕ:** ನಗರದಲ್ಲಿ ಇರುವ ಉಪಕಾರಾಗೃಹದಲ್ಲಿ ಭದ್ರತಾ ಲೋಪವಾಗಿದ್ದು, ಚಿಕ್ಕೋಡಿ ನ್ಯಾಯಾಲಯದ ಆದೇಶದಂತೆ ಜೈಲು ಸೇರಿದ್ದ ಕೈದಿಯೊಬ್ಬ ಕಾರಾಗೃಹ ಗೋಡೆ ಏರಿ ಪರಾರಿಯಾಗಿ ಸಾರ್ವಜನಿಕರಿಂದ ಮತ್ತೆ ಕಂಬಿ ಎಣಿಸುವಂತಾಗಿದೆ.

ಚಿಕ್ಕೋಡಿ ತಾಲ್ಲೂಕಿನ ಉಮರಾಣಿ ಗ್ರಾಮದ ರಾಘವೇಂದ್ರ ಅಲಿಯಾಸ್ ರಘು ಶಿವಗೌಡ ಕರೆಣ್ಣವರ ಎಂಬ ವಿಚಾರಣಾಧೀನ ಖೈದಿ ಚಿಕ್ಕೋಡಿ ಪೊಲೀಸ್ ಠಾಣೆಯ ಅಪರಾಧ ಸಂಖ್ಯೆ 84/2026 ರ ಪ್ರಕರಣದಲ್ಲಿ ನ್ಯಾಯಾಂಗ ಬಂಧನಕ್ಕೊಳಗಾಗಿ ಮಾರ್ಚ್ 22ರಂದು ಗೋಕಾಕ ಜೈಲು ಸೇರಿದ್ದ ಜೈಲು ಸೇರಿದ ಕೆಲವೇ ಗಂಟೆಗಳಲ್ಲಿ ಸೋಮವಾರದಂದು ಗೋಕಾಕ ಕಾರಾಗೃದದ ಮುಂಭಾಗದ ಕಾಂಪೌಂಡ್ ಪಕ್ಕದಲ್ಲಿದ್ದ ಎಕ್ಕಿ ಗಿಡವನ್ನೇರಿ, ಬಳಿಕ ಮರದ ಕಟ್ಟಿಗೆಯ ಸಹಾಯದಿಂದ ಹಿಂಬದಿಯ ಕಾಂಪೌಂಡ್ ಗೋಡೆ ಜಿಗಿದು ಎಲ್‌ಇಟಿ ಕಾಲೇಜು ರಸ್ತೆಯ ಮೂಲಕ ಪರಾರಿಯಾಗಿದ್ದನು.

ಕಾರಾಗೃಹದಿಂದ ಪರಾರಿಯಾಗಿದ್ದ ವಿಚಾರಣಾಧೀನ ಖೈದಿ ಯರಗಟ್ಟಿಗೆ ತಲುಪಿದ್ದ ಆರೋಪಿಯ ಬಗ್ಗೆ ಅಲ್ಲಿನ ಸ್ಥಳೀಯರಿಗೆ ಸಂಶಯ ಬಂದು ಯರಗಟ್ಟಿ ಪೊಲೀಸರಿಗೆ ಮಾಹಿತಿ ನೀಡಿದ್ದು ತಕ್ಷಣ ಕಾರ್ಯಪ್ರವೃತ್ತರಾದ ಪೋಲಿಸರು ಸಾರ್ವಜನಿಕರ ಜಂಟಿ ಕಾರ್ಯಾಚರಣೆಯ ಫಲವಾಗಿ ಪರಾರಿಯಾಗಿದ್ದ ರಾಘವೇಂದ್ರನನ್ನು ವಶಕ್ಕೆ ಪಡೆದು ಮತ್ತೆ ಜೈಲಿಗೆ ಒಪ್ಪಿಸಿದ್ದಾರೆ.

ವಿಚಾರಣಾಧೀನ ಖೈದಿ ರಾಘು ಪರಾರಿ ಕುರಿತು ಮತ್ತು ಭದ್ರತಾ ಲೋಪದ ಕುರಿತು ಗೋಕಾಕ ನಗರ ಪೊಲೀಸ್ ಠಾಣೆಯಲ್ಲಿ ಪ್ರತ್ಯೇಕ ಪ್ರಕರಣ ದಾಖಲಾಗಿದೆ.

# ಬೆಳಗಾವಿ ಜಿಲ್ಲೆಯ 21 ರೈತ ಉತ್ಪಾದಕ ಸಂಸ್ಥೆಗಳಿಗೆ (ಎಫ್‌ಪಿಒ) ಕೇಂದ್ರದಿಂದ 1.80 ಕೋಟಿ ರೂ.ಗಳ ಅನುದಾನ: ಸಂಸದ ಈರಣ್ಣ ಕಡಾಡಿ

**ಬೆಳಗಾವಿ ವಾರ್ತೆ**

**ಮೂಡಲಗಿ:** ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರವು ಬೆಳಗಾವಿ ಜಿಲ್ಲೆಯ ರೈತರನ್ನು ಆರ್ಥಿಕವಾಗಿ ಸದೃಢಗೊಳಿಸಲು ಬದ್ಧವಾಗಿದ್ದು, '10,000 ಎಫ್‌ಪಿಒಗಳ ರಚನೆ ಮತ್ತು ಉತ್ತೇಜನ' ಯೋಜನೆಯಡಿ ಜಿಲ್ಲೆಯಲ್ಲಿ 21 ರೈತ ಉತ್ಪಾದಕ ಸಂಸ್ಥೆಗಳನ್ನು ಸ್ಥಾಪಿಸಲಾಗಿದೆ ಮತ್ತು ಜಿಲ್ಲೆಯ 17 ಎಫ್‌ಪಿಒಗಳಿಗೆ ಒಟ್ಟು 1.80 ಕೋಟಿ ರೂ. ಈಕ್ವಿಟಿ ಗ್ರಾಂಟ್ ನೀಡಲಾಗಿದೆ. ಅಲ್ಲದೆ, 4 ಅರ್ಹ ಎಫ್‌ಪಿಒಗಳಿಗೆ 34.48 ಲಕ್ಷ ರೂ. ಸಾಲದ ಸೌಲಭ್ಯವನ್ನು ಮಂಜೂರು ಮಾಡಲಾಗಿದೆ

ಎಂದು ಕೇಂದ್ರ ಕೃಷಿ ಖಾತೆ ರಾಜ್ಯ ಸಚಿವ ರಾಮನಾಥ್ ಠಾಕೂರ್ ಅವರು ಲಿಖಿತ ಉತ್ತರದಲ್ಲಿ ಮಾಹಿತಿ ನೀಡಿದ್ದಾರೆಂದು ರಾಜ್ಯಸಭಾ ಸಂಸದ ಈರಣ್ಣ ಕಡಾಡಿ ಅವರು ತಿಳಿಸಿದ್ದಾರೆ.

ನವದೆಹಲಿಯಲ್ಲಿ ನಡೆಯುತ್ತಿರುವ ಸಂಸತ್ತಿನ ಬಜೆಟ್ ಅಧಿವೇಶನದಲ್ಲಿ ಬೆಳಗಾವಿ ಜಿಲ್ಲೆಯಲ್ಲಿ ಎಫ್‌ಪಿಒ ಗಳ ರಚನೆ ಮತ್ತು ಕಾರ್ಯವೈಖರಿ ಕುರಿತು ಕೇಳಿದ ಪ್ರಶ್ನೆಗೆ ಉತ್ತರಿಸಿದ ಸಚಿವರು ಈ ಸಂಸ್ಥೆಗಳು ಪ್ರಸ್ತುತ ಧಾನ್ಯಗಳು, ಬೇಳೆಕಾಳುಗಳು, ಎಣ್ಣೆಕಾಳುಗಳು, ಕಬ್ಬು ಮತ್ತು ತೋಟಗಾರಿಕಾ ಬೆಳೆಗಳ ಸಂಗ್ರಹಣೆ ಹಾಗೂ ಪ್ರಾಥಮಿಕ ಸಂಸ್ಕರಣಾ ಚಟುವಟಿಕೆಗಳಲ್ಲಿ ಹಾಗೂ ಮಾರಾಟದಲ್ಲಿ ತೊಡಗಿಸಿಕೊಂಡಿವೆ. ರೈತರು ತಮ್ಮ ಬೆಳೆಗಳಿಗೆ ತಾವೇ ಬೆಲೆ ನಿಗದಿಪಡಿಸಲು ಅನುಕೂಲವಾಗುವಂತೆ ಆನ್‌ಲೈನ್ ಮೂಲಕ ದೇಶಾದ್ಯಂತ ವ್ಯಾಪಾರ ಮಾಡಲು 10 ಎಫ್‌ಪಿಒಗಳನ್ನು ಇ-ನಾಮ್ (ರಾಷ್ಟ್ರೀಯ ಕೃಷಿ ಮಾರುಕಟ್ಟೆ) ವೇದಿಕೆಗೆ ಜೋಡಿಸಲಾಗಿದೆ. ಈ ಎಫ್‌ಪಿಒ ಗಳಿಗೆ ಆನ್‌ಲೈನ್ ವ್ಯಾಪಾರದ ಬಗ್ಗೆ ವಿಶೇಷ ತರಬೇತಿ ನೀಡಲಾಗಿದೆ.

ಕೃಷಿ ಚಟುವಟಿಕೆಗಳಲ್ಲಿ ಯಾಂತ್ರೀಕರಣವನ್ನು ಹೆಚ್ಚಿಸುವುದು ಮತ್ತು ಸಣ್ಣ ಹಾಗೂ ಅತಿಸಣ್ಣ ರೈತರಿಗೆ ದುಬಾರಿ ಕೃಷಿ ಯಂತ್ರೋಪಕರಣಗಳನ್ನು ಬಾಡಿಗೆಗೆ ಪಡೆಯಲು ಅನುಕೂಲವಾಗುವಂತೆ ಎಫ್‌ಪಿಒಗಳ ಮೂಲಕ ಕಸ್ಟಮ್ ಹೈರಿಂಗ್ ಸೆಂಟರ್ ಸ್ಥಾಪಿಸಲು ಸರ್ಕಾರ ಉತ್ತೇಜನ ನೀಡುತ್ತಿದೆ ಮತ್ತು ಕೃಷಿ ಮೂಲಸೌಕರ್ಯ ನಿಧಿ ಅಡಿಯಲ್ಲಿ ಸಂಸ್ಕರಣಾ ಘಟಕಗಳು ಮತ್ತು ಚಟುವಟಿಕೆ ಕೇಂದ್ರಗಳನ್ನು ಸ್ಥಾಪಿಸಲು ಕೇಂದ್ರ ಸರ್ಕಾರವು ಸಬ್ಸಿಡಿ ಮತ್ತು ಬಡ್ಡಿರಿಯಾಯಿತಿ ಸಾಲದ ನೆರವು ನೀಡುತ್ತಿದೆ.

ಬೆಳಗಾವಿ ಜಿಲ್ಲೆಯ ರೈತ ಸಮುದಾಯವು ಕೇವಲ ಸಾಂಪ್ರದಾಯಿಕ ಕೃಷಿಗೆ ಸೀಮಿತವಾಗದೆ, ತಾಂತ್ರಿಕವಾಗಿ ಮತ್ತು ಆರ್ಥಿಕವಾಗಿ ಸ್ವಾವಲಂಬಿಯಾಗಬೇಕು ಎನ್ನುವುದು ಕೇಂದ್ರ ಸರ್ಕಾರದ ಮೂಲ ಉದ್ದೇಶವಾಗಿದೆ. ರೈತ ಉತ್ಪಾದಕ ಸಂಸ್ಥೆಗಳ ) ಮೂಲಕ ರೈತರು ಒಗ್ಗೂಡಿ ಬೆಳೆ ಬೆಳೆಯುವುದರಿಂದ ಮತ್ತು



ಮಾರುಕಟ್ಟೆಯಲ್ಲಿ ಯಾವುದೇ ಮಧ್ಯವರ್ತಿಗಳಿಲ್ಲದೆ ನೇರವಾಗಿ ವ್ಯಾಪಾರ ಮಾಡುವುದರಿಂದ ರೈತರ ಆದಾಯವನ್ನು ದುಪ್ಪಟ್ಟುಗೊಳಿಸಲು ಸಾಧ್ಯವಿದೆ. ಜಿಲ್ಲೆಯ ಪ್ರತಿಯೊಬ್ಬ ರೈತರು ಈ ಯೋಜನೆಗಳ ಲಾಭ ಪಡೆದು ಆರ್ಥಿಕ ಪ್ರಗತಿ ಸಾಧಿಸಬೇಕೆಂದು ಸಚಿವರು ಮಾಹಿತಿ ನೀಡಿದ್ದಾರೆಂದು ಸಂಸದ ಈರಣ್ಣ ಕಡಾಡಿ ತಿಳಿಸಿದ್ದಾರೆ.



**ಬೆಳಗಾವಿ ವಾರ್ತೆ**

ಗೋಕಾಕ: ಶಿವಮೊಗ್ಗದ ಮೃಗಾಲಯದಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದ ಡಾ.ಸಮೀಕ್ಷಾ ರೆಡ್ಡಿ ನೀರಾನೆಗೆ ಚಿಕಿತ್ಸೆ ನೀಡುವ ಸಂದರ್ಭದಲ್ಲಿ ನೀರಾನೆ ದಾಳಿಯಿಂದ ಮೃತಪಟ್ಟ ಹಿನ್ನಲೆ ಗೋಕಾಕ ಹಾಗೂ ಮೂಡಲಗಿ ತಾಲೂಕಿನ ಪಶು ವೈದ್ಯಕೀಯ ಇಲಾಖೆಯಿಂದ ನಗರದ ಪಶು ಆಸ್ಪತ್ರೆಯಲ್ಲಿ ಶ್ರದ್ಧಾಂಜಲಿ ಸಲ್ಲಿಸಲಾಯಿತು.

ಮುಖ್ಯ ಪಶು ವೈದ್ಯಾಧಿಕಾರಿ ಡಾ.ಮೋಹನ ಕಮತ ಅವರು ಡಾ.ಸಮೀಕ್ಷಾ ರೆಡ್ಡಿ ಸಾವಿನ ಬಗ್ಗೆ ಉನ್ನತ ತನಿಖೆಯಾಗಿಬೇಕೆಂದು ಆಗ್ರಹಿಸಿದರು. ಈ ಸಂದರ್ಭದಲ್ಲಿ ಗೋಕಾಕ ಹಾಗು ಮೂಡಲಗಿ ತಾಲೂಕಿನ ಎಲ್ಲ ಅಧಿಕಾರಿಗಳು ಹಾಗು ಸಿಬಂಧಿ ವರ್ಗದವರು ಇದ್ದರು.

# ಮಾಜಿ ಶಾಸಕ ಬಾಬುರಾವ್ ಬೋಳಶೆಟ್ಟಿ ಅವರ ಪುತ್ರ ಸುಟ್ಟ ಸ್ಥಿತಿಯಲ್ಲಿ ಪತ್ತೆ



**ಬೆಳಗಾವಿ ವಾರ್ತೆ**

**ಧಾರವಾಡ:** ಜಿಲ್ಲೆಯ ರಾಮಾಪುರ ಅರಣ್ಯ ವ್ಯಾಪ್ತಿಯ ನಿರ್ಜನ ಪ್ರದೇಶದಲ್ಲಿ ಬೆಳಗಾವಿ ಜಿಲ್ಲೆಯ ಬೈಲಹೊಂಗಲ ಕ್ಷೇತ್ರದ ಮಾಜಿ ಶಾಸಕ ಬಾಬುರಾವ್ ಬೋಳಶೆಟ್ಟಿ ಅವರ ಪುತ್ರ ರಾಜು ಬೋಳಶೆಟ್ಟಿ (53) ಅವರ ಶವವು ಕಾರಿನಲ್ಲೇ ಸಂಪೂರ್ಣ ಸುಟ್ಟ ಸ್ಥಿತಿಯಲ್ಲಿ ಪತ್ತೆಯಾಗಿದೆ.

ಈ ಘಟನೆಯು ಜಿಲ್ಲೆಯಾದ್ಯಂತ ಭಾರಿ ಸಂಚಲನ ಮೂಡಿಸಿದ್ದು, ಇದು ಪೂರ್ವನಿಯೋಜಿತ ಕೊಲೆ ಎಂಬ ಬಲವಾದ ಶಂಕೆ ವ್ಯಕ್ತವಾಗಿದೆ. ಧಾರವಾಡ ತಾಲೂಕಿನ ರಾಮಾಪುರ ಗ್ರಾಮದ ರೈಲ್ವೆ ಟ್ರ್ಯಾಕ್ ಪಕ್ಕದಲ್ಲಿರುವ ದಟ್ಟ ಅರಣ್ಯ ಪ್ರದೇಶದಲ್ಲಿ ಈ ದಾರುಣ ಘಟನೆ ಸಂಭವಿಸಿದೆ. ಕಾರಿಗೆ ಬೆಂಕಿ ಹಚ್ಚಲಾಗಿದ್ದು, ಒಳಗಿದ್ದ ರಾಜು ಬೋಳಶೆಟ್ಟಿ ಅವರ ದೇಹ ಸಂ ಪೂರ್ಣ ಸುಟ್ಟು ಕರಕಲಾಗಿದೆ. ಗುರುತು ಸಿಗದಷ್ಟು ಸ್ಥಿತಿಯಲ್ಲಿ ದೇಹ ಪತ್ತೆಯಾಗಿದೆ. ಧಾರವಾಡ ಗ್ರಾಮಾಂತರ ಠಾಣೆ ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ನಿರ್ಜನ ಪ್ರದೇಶದಲ್ಲಿ ಕಾರಿಗೆ ಬೆಂಕಿ ಹಚ್ಚಿ ದುಷ್ಕರ್ಮಿಗಳು ಪರಾರಿಯಾಗಿರಬಹುದು ಎಂದು ಶಂಕಿಸಲಾಗಿದೆ. ಪೊಲೀಸರು ಪ್ರಕರಣ ದಾಖಲಿಸಿಕೊಂಡು ತನಿಖೆ ಚುರುಕುಗೊಳಿಸಿದ್ದಾರೆ



**ಬೆಳಗಾವಿ ವಾರ್ತೆ**

**ಹುಬ್ಬಳ್ಳಿ:** ಕೆ.ಎಲ್.ಇ ಸಂಸ್ಥೆಯ ಸಿ.ಆಯ್.ಮುನವಳ್ಳಿ ಪಾಲಿಟೆಕ್ನಿಕ್‌ನ ಪ್ರಾಚಾರ್ಯ ಪ್ರೊ ವೀರೇಶ ಬಿ. ಅಂಗಡಿ ಅವರ ಜನ್ಮದಿನ ಅಂಗವಾಗಿ ಪ್ರೊ ಅಂಗಡಿ ಅವರಿಗೆ ಹೊರಕೇರಿ ಮಾಸ್ತರ ಶಿಕ್ಷಣ ಪ್ರತಿಷ್ಠಾನ, ರಾಣಿಚನ್ನಮ್ಮ ಪರಿಸರ ಸೇವಾ ಸಮಿತಿಯ, ಬಸವ ಪರಿಸರ ಸಂರಕ್ಷಣಾ ಸಮಿತಿಯ ವತಿಯಿಂದ ಶಾಲು, ಗ್ರಂಥ ನೀಡಿ, ಮಾಲಾರ್ಪಣೆ ಮಾಡಿ ಆತ್ಮೀಯತೆ, ಹೃದಯದಿಂದ ಗೌರವಪೂರ್ವಕವಾಗಿ ಸನ್ಮಾನಿಸಲಾಯಿತು.

ಜನ್ಮದಿನ ಶುಭಾಶಯ ಕೋರಿದರು. ಚನ್ನಬಸಪ್ಪ ಧಾರವಾಡಶೆಟ್ಟರ್, ರಾಣಿಚನ್ನಮ್ಮ ಪರಿಸರ ಸೇವಾ ಸಮಿತಿಯ ಕಾರ್ಯದರ್ಶಿ, ಬಸವ ಪರಿಸರ ಸಂರಕ್ಷಣಾ ಸಮಿತಿಯ ಕಾರ್ಯದರ್ಶಿ, ಕರ್ನಾಟಕ ಜ್ಞಾನ ವಿಜ್ಞಾನ ಸಮಿತಿಯ ಜಿಲ್ಲಾ ಘಟಕದ ಉಪಾಧ್ಯಕ್ಷ, ಕರ್ನಾಟಕ ವಚನ ಸಾಹಿತ್ಯ ಪರಿಷತ್‌ನ ಜಿಲ್ಲಾ ಘಟಕದ ಕಾರ್ಯಾಧ್ಯಕ್ಷ, ಹೊರಕೇರಿ ಮಾಸ್ತರ ಶಿಕ್ಷಣ ಪ್ರತಿಷ್ಠಾನದ ಟ್ರಸ್ಟಿ, ಗ್ರಂಥಪಾಲಕ ಡಾ. ಸುರೇಶ ಡಿ. ಹೊರಕೇರಿ, ಶ್ರೀಶೈಲ ತುಂಗಳದ, ಹೇಮಾ ಜವಳಿ, ಸಂತೋಷ ಕಂಠಿ, ಡಾ. ಬಸವಕುಮಾರ ತಲವಾಯಿ, ಎಸ್ ಎಸ್ ಬಿರಾದಾರ , ಬಿ ಎಸ್ ಶೆಟ್ಟರ, ತಮ್ಮಣ್ಣ ಕರಿಕಟ್ಟಿ, ಮುಂತಾದವರು ಇದ್ದರು.

# ಚಿನ್ನದ ವ್ಯಾಪಾರ ಮಾಡುವವರಿಗೆ ಅನಗತ್ಯ ತೊಂದರೆ ಆಗದಂತೆ ಕ್ರಮ ಕೈಗೊಳ್ಳಲು ಸರ್ಕಾರ ಬದ್ಧವಿದೆ: ಸಚಿವ ಸತೀಶ ಜಾರಕಿಹೊಳಿ

**ಬೆಳಗಾವಿ ವಾರ್ತೆ**

**ಬೆಳಗಾವಿ:** ಚಿನ್ನದ ವ್ಯಾಪಾರ ಮಾಡುವವರಿಗೆ ಅನಗತ್ಯ ತೊಂದರೆ ಆಗದಂತೆ ಕ್ರಮ ಕೈಗೊಳ್ಳಲು ಸರ್ಕಾರ ಬದ್ಧವಿದೆ ಎಂದು ಲೋಕೋಪಯೋಗಿ ಇಲಾಖೆ ಸಚಿವ ಸತೀಶ್ ಜಾರಕಿಹೊಳಿ ಅವರು ಹೇಳಿದರು.

ಬೆಳಗಾವಿ ಸುವರ್ಣಸೌಧ ಸಭಾಂಗಣದಲ್ಲಿ ಮಂಗಳವಾರ ದೈವಜ್ಞ ಜ್ಯುವೆಲರ್ಸ್ ನ ಅಸೋಸಿಯೇಷನ್ ವತಿಯಿಂದ ಮಂಗಳವಾರ ಆಯೋಜಿಸಿದ್ದ "ಸುವರ್ಣ ಸಮ್ಮೇಳನ" ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಸಾಂಪ್ರದಾಯಿಕ ಆಭರಣ ತಯಾರಕರು ಮತ್ತು ಕುಶಲಕರ್ಮಿಗಳು ಎದುರಿಸುತ್ತಿರುವ ಸವಾಲುಗಳನ್ನು ಸರ್ಕಾರ ಗಮನಿಸುತ್ತಿದ್ದು, ಈ ಅಸಂಘಟಿತ ವಲಯ ಬಲಪಡಿಸಲು ಅಗತ್ಯ ಸಹಕಾರ ನೀಡಲಾಗುವುದು. ಬೆಳಗಾವಿಯ ಆಭರಣ ಕಲೆಗೆ ಜಾಗತಿಕ ಮಾನ್ಯತೆ ದೊರಕಿಸಿಕೊಡುವಲ್ಲಿ ಮತ್ತು ಸಾಂಸ್ಕೃತಿಕ ಪರಂಪರೆ ಉಳಿಸುವಲ್ಲಿ ಇಂತಹ ಸಮ್ಮೇಳನಗಳು ಸಹಕಾರಿ ಎಂದು ಸಚಿವರು ಶ್ಲಾಘಿಸಿದರು.







ಬೆಳಗಾವಿ ಜಿಲ್ಲೆಯ ಆಭರಣೋದ್ಯಮವು ಸ್ಥಳೀಯ ಆರ್ಥಿಕತೆಗೆ ದೊಡ್ಡ ಕೊಡುಗೆ ನೀಡುತ್ತಿದ್ದು, ವ್ಯಾಪಾರಿಗಳು ಮತ್ತು ಗ್ರಾಹಕರ ಹಿತರಕ್ಷಣೆಗೆ ಪೂರಕವಾದ ವಾತಾವರಣ ನಿರ್ಮಿಸಲು ಸರ್ಕಾರ ಬದ್ಧವಾಗಿದೆ ಎಂದರು.

ತಲೆಮಾರುಗಳಿಂದ ಈ ವೃತ್ತಿಯಲ್ಲಿರುವವರ ಹಿತಾಸಕ್ತಿ ಕಾಪಾಡುವಲ್ಲಿ ಅಸೋಸಿಯೇಷನ್ ಶ್ರಮಿಸಬೇಕು ಮತ್ತು ಉದ್ಯಮ ಎದುರಿಸುತ್ತಿರುವ ಇಂದಿನ ಸವಾಲುಗಳಿಗೆ ಪರಿಹಾರ ಕಂಡುಕೊಳ್ಳಬೇಕು. ಆಭರಣ ಉದ್ಯಮದ ಅಭಿವೃದ್ಧಿ ಹಾಗೂ ವ್ಯಾಪಾರಿಗಳ ಸಮಸ್ಯೆಗಳಿಗೆ ಸ್ಪಂದಿಸಲು ಸರ್ಕಾರ ಸಿದ್ಧವಿದೆ ಎಂದು ಭರವಸೆ ನೀಡಿದರು.

ಅಖಿಲ ಭಾರತ ರತ್ನ ಮತ್ತು ಆಭರಣ ದೇಶೀಯ ಮಂಡಳಿ ಅಧ್ಯಕ್ಷ ರಾಜೇಶ ರೊಕಡೆ ಮಾತನಾಡಿ, ಚಿನ್ನದ ವ್ಯಾಪಾರದಲ್ಲಿ ಮೋಸ ತಡೆಗಟ್ಟಬೇಕು. ಜುವಲರ್ಸ್ ಶಾಪ್ ಗಳಿಗೆ ಭದ್ರತೆ ನೀಡಬೇಕು. ಚಿನ್ನದ ವ್ಯಾಪಾರಿಗಳಿಗೆ ಯಾವುದೇ ಸಮಸ್ಯೆ ಆಗದಂತೆ ಪೊಲೀಸ್ ಇಲಾಖೆ ಭದ್ರತಾ ವ್ಯವಸ್ಥೆ ನೀಡಬೇಕು ಎಂದು ಇದೇ ವೇಳೆ ಮನವಿ ಮಾಡಿದರು.

ಬೆಳಗಾವಿ ದಕ್ಷಿಣ ಕ್ಷೇತ್ರದ ಶಾಸಕ ಅಭಯ ಪಾಟೀಲ ಮಾತನಾಡಿ, ಚಿನ್ನದ ವ್ಯಾಪಾರಕ್ಕೆ ಸಂಬಂಧಿಸಿದ ಕಾನೂನಾತ್ಮಕ ಅಥವಾ ಆಡಳಿತಾತ್ಮಕ ಅಡೆತಡೆಗಳನ್ನು ಚರ್ಚಿಸಲು ಮತ್ತು ಅವುಗಳನ್ನು ಶೀಘ್ರವಾಗಿ ಇತ್ಯರ್ಥಗೊಳಿಸಲು ಅಧಿಕಾರಿ ಗಳೊಂದಿಗೆ ಸಭೆ ನಡೆಸುವುದಾಗಿ ತಿಳಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾಧಿಕಾರಿ ಮೊಹಮ್ಮದ ರೋಷನ್, ದೈವಜ್ಞ ಜ್ಯುವೆಲರ್ಸ್ ನ ಅಸೋಸಿಯೇಷನ್ ಅಧ್ಯಕ್ಷ ಮಣಿಕಂಠ ಅನ್ವೇಕರ್, ಗೌರವ ಕಾರ್ಯದರ್ಶಿ ವೈಭವ ವೆರ್ಣೇಕರ್, ಚೇರ್ಮನ್ ರಾಜೇಶ ರೊಕಡೆ, ಚೇರ್ಮ ನ್ ಅವಿನಾಶ್ ಗುಪ್ತಾ, ಡಾ. ಚೇತನ್ ಕುಮಾರ್ ಮೇಹತಾ, ಶ್ರೀಕಾಂತ ಕರಿ, ಗಜಾನನ ಅನವೇಕರ್ , ವೈಭವ್ ವೆರನೇಕರ್, ಪ್ರಶಾಂತ ರೇವನಕರ್, ಜೀವನ, ವೇರನೇಕರ್, ನಾಗರಾಜ್ ವೇರನೇಕರ್, ಸಂಜಯ ಅವನೇಕರ್, ಗಿರೀಶ ಜಯಾನಂದ ಅರ್ಕಸಾಲಿ, ಕ್ಯಾಮಲಾಪೂರಿ ಘಟಪ್ರಭಾ, ಭಡಾಶ ಬೈಲಹೊಂಗಲ ಹಾಗೂ ಇತರರು ಇದ್ದರು.

# ಅಕ್ಕ-ಪಕ್ಕ ನಿಂತು ಗಮನ ಸೆಳೆದ ರಾಜಕೀಯ ಬದ್ಧ ವೈರಿಗಳು




**ಬೆಳಗಾವಿ ವಾರ್ತೆ**

**ಬೆಳಗಾವಿ:** ಬೆಳಗಾವಿ ಸುವರ್ಣಸೌಧ ಸಭಾಂಗಣದಲ್ಲಿ ಮಂಗಳವಾರ ದೈವಜ್ಞ ಜ್ಯುವೆಲರ್ಸ್ ನ ಅಸೋಸಿಯೇಷನ್ ನಿಂದ ಆಯೋಜಿಸಿದ್ದ ಸುವರ್ಣ ಸಮ್ಮೇಳನ ಕಾರ್ಯಕ್ರಮದಲ್ಲಿ ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ಹಾಗೂ ಶಾಸಕ ಅಭಯ್ ಪಾಟೀಲ ಈ ಇಬ್ಬರು ರಾಜಕೀಯ ಬದ್ಧ ವೈರಿಗಳು ಅಕ್ಕ-ಪಕ್ಕ ನಿಂತು ಗಮನ ಸೆಳೆದರು.

ಹೌದು... ಇಂದು ಸುವರ್ಣಸೌಧದಲ್ಲಿ ನಡೆದ ಕಾರ್ಯಕ್ರಮದಲ್ಲಿ ಸಚಿವ ಸತೀಶ್ ಜಾರಕಿಹೊಳಿ ಹಾಗೂ ಶಾಸಕ ಅಭಯ್ ಪಾಟೀಲ ಅಕ್ಕ-ಪಕ್ಕದಲ್ಲಿ ನಿಂತರೂ ಈ ಇಬ್ಬರು ಒಬ್ಬರಿಗೊಬ್ಬರು ಹೆಚ್ಚೇನು ಮಾತನಾಡಲಿಲ್ಲ. ಈ ಇಬ್ಬರು ರಾಜಕೀಯ ವಿರೋಧಿಗಳು ಒಟ್ಟಾಗಿ ನಿಂತಿದ್ದನ್ನು ಕಂಡು ಚಿನ್ನದ ವ್ಯಾಪಾರಿಗಳು ಆಶ್ಚರ್ಯಗೊಂಡರು.

**ರಾಜಕೀಯದಲ್ಲಿ ನಿಲ್ಲದ ಈ ಇಬ್ಬರು ಟಾಕ್ ಫೈಟ್:** ಬೆಳಗಾವಿ ರಾಜಕಾರಣದಲ್ಲಿ ಕಾಂಗ್ರೆಸ್‌ನ ಸತೀಶ್ ಜಾರಕಿಹೊಳಿ ಮತ್ತು ಬಿಜೆಪಿಯ ಅಭಯ ಪಾಟೀಲ್ ದೀರ್ಘಕಾಲದ ರಾಜಕೀಯ ಎದುರಾಳಿಗಳಾಗಿದ್ದು, ಇವರಿಬ್ಬರ ನಡುವಿನ "ಬಿಗ್ ಫೈಟ್" ಪದೇ ಪದೆ ಸುದ್ದಿಯಾಗುತ್ತಲೇ ಇರುತ್ತದೆ. ಅಭಯ ಪಾಟೀಲ್ ಅವರು ಸತೀಶ್ ಜಾರಕಿಹೊಳಿಯವರ ಆಡಳಿತ ಮತ್ತು ಹೇಳಿಕೆಗಳನ್ನು ತೀವ್ರವಾಗಿ ವಿರೋಧಿಸುತ್ತಾ ಸಾಗಿದರೆ, ಸಚಿವ ಸತೀಶ್ ಜಾರಕಿಹೊಳಿ ಅವರು ಹಿಂದೆ ಸ್ಮಾರ್ಟ್ ಸಿಟಿ ಕಾಮಗಾರಿ ಹಾಗೂ ತಿನಿಸು ಕಟ್ಟೆಯಲ್ಲಿ ಅಕ್ರಮ ನಡೆದಿರುವ ಕುರಿತು ಸಾಕಷ್ಟು ಆರೋಪಗಳನ್ನು ಮಾಡಿದ್ದರು. ಇದಲ್ಲದೇ ಹಿಂದೆ ವಾತಾವರಣ ಶುದ್ಧಿಗಾಗಿ ಬೆಳಗಾವಿ ದಕ್ಷಿಣ ಮತಕ್ಷೇತ್ರದ ಶಾಸಕ ಅಭಯ್ ಪಾಟೀಲ್ ಹೋಮ ಹವನ ನಡೆಸಿದ್ದರು.

ಇದರಿಂದಾಗಿ ಅಭಯ ಪಾಟೀಲ ಕಾರ್ಯವೈಖರಿಗೆ ಕೆಲವು ಸಹಮತ ಸೂಚಿಸಿದ್ದರೆ, ಇನ್ನು ಕೆಲವರು ಇದು ಮೂಢನಂಬಿಕೆಯ ಪರಮಾವಧಿ ಎಂದಿದ್ದರು. ಅಭಯ ಪಾಟೀಲವರು ಒಬ್ಬ ಶಾಸಕರಾಗಿ ಜನರಲ್ಲಿ ವೈಜ್ಞಾನಿಕ ಮನೋಭಾವ ಬಿತ್ತಬೇಕು ಈ ತರದ ಮೂಢನಂಬಿಕೆಯನ್ನಲ್ಲ ಎಂದು ಸತೀಶ್ ಹೇಳಿದ್ದರು. ಇದೇ ರೀತಿ ಈ ಇಬ್ಬರು ನಡುವೆ ಸಾಕಷ್ಟು ಆರೋಪ ಪ್ರತ್ಯಾರೋಪಗಳು ನಡೆಯುತ್ತಾಲೇ ಬಂದಿದೆ. ಆದರೆ ಇಂದು ನಡೆದ ಕಾರ್ಯಕ್ರಮದಲ್ಲಿ ಈ ಇಬ್ಬರು ರಾಜಕೀಯ ವ್ಯಕ್ತಿಗಳು ಒಟ್ಟಿಗೆ ಪಾಲ್ಗೊಂಡಿದ್ದು ಅಪರೂಪವಾಗದಂತೂ ಸತ್ಯ.

BELAGAVI VARTE Kannada Daily morning news paper Editor, Printer, Publisher and Owned by MAHESHWARI BHIMASHI BHARAMANNAVAR, 221/1A/1A/1A MAHALINGESHWAR NAGAR, NEAR BCA HOSTEL BELAGAVI KARNATAKA 591307. Printed at RAJADHANI PRINTING PRESS, CTS NO.1720/B1, SHOP NO.2 KELKARBAG, BELAGAVI, KARNATAKA - 590001